ಗರಿಷ್ಠ 36°c | ಕನಿಷ್ಠ 25°c

## ಸುದ್ದಿ ಸಿಂಚನ

### ಪಿ.ವಾಣಿ ಜಿಲ್ಲೆಗೆ ಟಾಪರ್

ಚಿತ್ರದುರ್ಗ: ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆ-1ರಲ್ಲಿ ತುರುವನೂರು ಸರ್ಕಾರಿ ಪದವಿ ಪೂರ್ವ ಕಾಲೇಜಿನ ಕಲಾ ವಿಭಾಗದ ಪಿ.ವಾಣಿ ಪಿ ಮರು



ಮೌಲ್ಯಮಾಪನದಲ್ಲಿ 581 ಅಂಕಗಳನ್ನು ಪಡೆದು ಜಿಲ್ಲೆಗೆ ಪ್ರಥಮ ಸ್ಥಾನ ಪಡೆದಿದ್ದಾರೆ. ಮೊದಲಿಗೆ 578 ಅಂಕಗಳನ್ನು ಪಡೆದು ಜಿಲ್ಲೆಗೆ ತೃತೀಯ ಸ್ಥಾನ ಪಡೆದಿದ್ದರು. ರಾಜ್ಯಶಾಸ್ತ್ರ ವಿಷಯದಲ್ಲಿ 90 ಅಂಕಗಳು ಬಂದಿದ್ದರಿಂದ ಆ ಉತ್ತರ ಪತ್ರಿಕೆಯನ್ನು ಮರು ಮೌಲ್ಯಮಾಪನಕ್ಕೊಳಪಡಿಸಿದಾಗ 3 ಅಂಕಗಳು ಸೇರ್ಪಡೆಗೊಂಡು 93 ಅಂಕಗಳು ಬಂದಿದ್ದರಿಂದ ಒಟ್ಟು 581 ಅಂಕಗಳೊಂದಿಗೆ ಶೇಕಡ 96.83% ರಷ್ಟು ಫಲಿತಾಂಶ ದಾಖಲಿಸಿ ಕಲಾ ವಿಭಾಗದಲ್ಲಿ ಚಿತ್ರದುರ್ಗ ಜಿಲ್ಲೆಗೆ ಪ್ರಥಮ ಸ್ಥಾನ ಪಡೆದಿದ್ದಾಳೆ. ವಿದ್ಯಾರ್ಥಿನಿಯ ಈ ಅತ್ಯುತ್ತಮ ಸಾಧನೆಗೆ ಶಾಸಕ ಟಿ.ರಘುಮೂರ್ತಿ, ಕಾಲೇಜು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷ ಬಾಬು ರೆಡ್ಡಿ, ಪ್ರಾಚಾರ್ಯ ಡಾ.ಕೃಷ್ಣಪ್ಪ.ಬಿ ಸೇರಿದಂತೆ ಉಪನ್ಯಾಸಕರು ಮತ್ತು ಸಿಬ್ಬಂದಿ ವರ್ಗ ಅಭಿನಂದಿಸಿದ್ದಾರೆ.

### ಶಿವಪ್ರಕಾಶ್‌ಗೆ ಕರ್ನಾಟಕ ಕಲಾಶ್ರೀ ಪ್ರಶಸ್ತಿ ಪ್ರದಾನ

ಚಿತ್ರದುರ್ಗ: ಇಲ್ಲಿನ ಅಂಜನಾ ನೃತ್ಯ ಕಲಾ ಕೇಂದ್ರದ ವಿದ್ವಾನ್ ಸಿ.ಆರ್.ಶಿವಪ್ರಕಾಶ್‌ರವರ ಕಲಾ ಸೇವೆಯನ್ನು ಗುರುತಿಸಿ ಕರ್ನಾಟಕ ಸಂಗಿತ ನೃತ್ಯ ಅಕಾಡೆಮಿಯಿಂದ ಬೆಂಗಳೂರಿನ ರವೀಂದ್ರ ಕಲಾ ಕ್ಷೇತ್ರದಲ್ಲಿ ಕರ್ನಾಟಕ ಕಲಾಶ್ರಿ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಭರತನಾಟ್ಯ ಕ್ಷೇತ್ರದಲ್ಲಿ ಕಳೆದ 42 ವರ್ಷಗಳಿಂದಲೂ ಅಪ್ರತಿಮೆ ಸಾಧನೆಗೈಯುವ ಮೂಲಕ ಸಾವಿರಾರು ವಿದ್ಯಾರ್ಥಿಗಳಿಗೆ ನೃತ್ಯ ತರಬೇತಿ ನೀಡಿ ಜಾಗತಿಕ ಮಟ್ಟಕ್ಕೆ ನೃತ್ಯ ಕಲೆಯನ್ನು ಕೊಂಡೊಯ್ದಿರುವ ಸಿ.ಆರ್.ಶಿವಪ್ರಕಾಶ್‌ರವರಲ್ಲಿರುವ ಅಮೋಘ ಪ್ರತಿಭೆಯನ್ನು ಗುರುತಿಸಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕರ್ನಾಟಕ ಸಂಗೀತ ನೃತ್ಯ ಅಕಾಡೆಮಿಯಿಂದ ರವೀಂದ್ರ ಕಲಾ ಕ್ಷೇತ್ರದಲ್ಲಿ ಆಯೋಜಿಸಲಾಗಿದ್ದ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಸಾಧಕರನ್ನು ಸನ್ಮಾನಿಸಲಾಯಿತು. ಎನ್.ನರೇಂದ್ರಬಾಬು, ಕೆ.ವಿ.ನಾಗರಾಜಮೂರ್ತಿ, ಮಾನಸ ಬಿ.ಎಸ್. ಮಂಜುನಾಥಸ್ವಾಮಿ, ಬಲವಂತರಾವ್ ಪಾಟೀಲ್, ಕಿರಣ್‌ಸಿಂಗ್ ಹಾಗೂ ಕರ್ನಾಟಕ ಸಂಗೀತ ನೃತ್ಯ ಅಕಾಡೆಮಿ ಅಧ್ಯಕ್ಷೆ ಶುಭ ಧನಂಜಯ್ ಅವರು ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಉಪಸ್ಥಿತರಿದ್ದರು.

### ಯುದ್ಧಗಳು ಬುದ್ಧ ಭಾರತದ ವಿರೋಧಿ ನೀತಿಗಳು: ವಿಶ್ವನಂದಾ

ಚಿತ್ರದುರ್ಗ: ವ್ಯವಹಾರಿಕ ನಿರ್ಬಂಧಗಳ ಕಾರಣಕ್ಕೆ ನಡೆಯುವ ಯುದ್ಧಗಳು ಬುದ್ಧ ಭಾರತದ ವಿರೋಧಿ ನೀತಿಗಳು. ಜಗತ್ತಿನ ಜೀವ ರಕ್ಷಣೆಗೆ ಬುದ್ಧನ ತತ್ವಗಳು ಮಹತ್ವದ್ದಾಗಿವೆ ಎಂದು ವಕೀಲ ವಕೀಲ ವಿಶ್ವನಂದಾ ವದ್ದೀಕೆರೆ ಹೇಳಿದರು. ನಗರ ಐಯುಡಿಪಿ ಲೇಔಟ್‌ನಲ್ಲಿರುವ ಜಂಬೂದ್ವೀಪದ ರಾಜ್ಯಾಧ್ಯಕ್ಷ ಉಪಾಸಕ ರಾಮಣ್ಣನವರ ಮನೆಯಲ್ಲಿ ನಡೆದ ಬುದ್ಧ ಜಯಂತಿ ಕಾರ್ಯಕ್ರಮದಲ್ಲಿ ಮಾತನಾಡಿದರು. ಪ್ರಾಧ್ಯಾಪಕ ಡಾ.ಸಂಜೀವಕುಮಾರ್‌ಪೋತೆ ಮಾತನಾಡಿ, ಜಗತ್ತಿಗೆ ಬುದ್ಧನ ಚಿಂತನೆಗಳ ಮಹತ್ವ ತಿಳಿಯಬೇಕು. ದೇಶಗಳನ್ನು ಆಳುವ ಅಧಿಕಾರಿ ವರ್ಗ ಮತ್ತು ರಾಜಕಾರಣಿಗಳು ಬುದ್ಧನ ತತ್ವಗಳು ಅರಿತರೆ ಯುದ್ಧದಂತ ಅಪಾಯಗಳು ತಪ್ಪುತ್ತವೆ. ಬುದ್ಧ ಆಶಿಸಿದಂತೆ ಮನುಷ್ಯನ ದುಃಖ ವಿಮೋಚನೆಗೆ ಕಾರಣವಾಗುತ್ತದೆ ಎಂದರು. ಉಪನ್ಯಾಸ ಹನುಮಂತಪ್ಪ ದಡಗೂರು, ಬುದ್ಧನ ಅನುಯಾಯಿಗಳಾದ ರಾಮಶೇಖರ್, ಸಿದ್ದೇಶ್, ಹನುಮಂತಪ್ಪ, ಪ್ರಕಾಶ್ ಯಾದಲಗಟ್ಟೆ, ನಿವೃತ್ತ ಇಂಜಿನಿಯರ್‌ಪಾತಣ್ಣ, ಆರೋಗ್ಯ ನಿರೀಕ್ಷಕ ಶ್ರೀನಿವಾಸ್, ಉಪನ್ಯಾಸಕರಾದ ವೇದಾಂತ ಏಳಂಜಿ, ಆರ್.ಮಂಜುನಾಥ ಇದ್ದರು.





ಚಿತ್ರದುರ್ಗ ಬಸವಕೇಂದ್ರ ಮುರುಘಾಮಠದಲ್ಲಿ ಮಂಗಳವಾರ ನಡೆದ ಸಾಮೂಹಿಕ ವಿವಾಹದಲ್ಲಿ ಬಿಜೆಪಿ ಮುಖಂಡ ರಾಜು ಕೋರಿ ಹಾಗೂ ಮೆದುಳು ಮತ್ತು ನರರೋಗ ತಜ್ಞ ಡಾ.ಸುನಿಲ್ ಕಲ್ಲೂರ ಅವರನ್ನು ಬಸವಪ್ರಭು ಸ್ವಾಮೀಜಿ ಸನ್ಮಾನಿಸಿದರು.



ಚಿತ್ರದುರ್ಗದ ಅಂಜನಾ ನೃತ್ಯ ಕಲಾ ಕೇಂದ್ರದ ವಿದ್ವಾನ್ ಸಿ.ಆರ್.ಶಿವಪ್ರಕಾಶ್‌ರವರ ಕಲಾ ಸೇವೆಯನ್ನು ಗುರುತಿಸಿ ಕರ್ನಾಟಕ ಸಂಗಿತ ನೃತ್ಯ ಅಕಾಡೆಮಿಯಿಂದ ಬೆಂಗಳೂರಿನ ರವೀಂದ್ರ ಕಲಾ ಕ್ಷೇತ್ರದಲ್ಲಿ ಕರ್ನಾಟಕ ಕಲಾಶ್ರಿ ಪ್ರಶಸ್ತಿ ನೀಡಿ ಗೌರವಿಸಲಾಯಿತು.



### ಅಗ್ನಿಶಾಮಕ ದಿನಾಚರಣೆ: ಕಾಲೇಜಲ್ಲಿ ಅಣಕು ಪ್ರದರ್ಶನ

ಚಿತ್ರದುರ್ಗ: ಅಂತಾರಾಷ್ಟ್ರೀಯ ಅಗ್ನಿಶಾಮಕ ದಿನಾಚರಣೆ ಅಂಗವಾಗಿ ಸರ್ಕಾರಿ ಕಲಾ ಕಾಲೇಜಿನಲ್ಲಿ ಮಂಗಳವಾರ ಅಗ್ನಿ ಅವಘಡ ವಿಪತ್ತು ನಿರ್ವಹಣಾ ಅಣಕು ಪ್ರದರ್ಶನ ನಡೆಯಿತು. ಜಿಲ್ಲಾ ಅಗ್ನಿಶಾಮಕ ಅಧಿಕಾರಿ ಸೋಮಶೇಖರ್‌ವಿ.ಅಗಡಿ, ಅಗ್ನಿಶಾಮಕ ಠಾಣಾಧಿಕಾರಿ ನರೇಂದ್ರ ಹಾಗೂ ಸಿಬ್ಬಂದಿ ರಕ್ಷಣಾ ಕಾರ್ಯಾಚರಣೆಯ ವಿವಿಧ ತಂತ್ರಗಳ ಬಗ್ಗೆ ಪ್ರಾತ್ಯಕ್ಷಿಕೆ ನೀಡಿದರು. ಆರೋಗ್ಯ ಇಲಾಖೆಯ ವೈದ್ಯಾಧಿಕಾರಿಗಳು ಗಾಯಾಳುಗಳಿಗೆ ನೀಡಬೇಕಾದ ತುರ್ತು ಚಿಕಿತ್ಸೆ ಹಾಗೂ ಟ್ರಯೇಜ್ ವಿಧಾನದ ಕುರಿತು ಮಾಹಿತಿ ನೀಡಿದರು. ರೆಡ್ ಕ್ರಾಸ್ ಮತ್ತು ಎನ್‌ಎಸ್‌ಎಸ್ ಸ್ವಯಂಸೇವಕರು ಅಣಕು ಪ್ರದರ್ಶನದಲ್ಲಿ ಸಕ್ರಿಯವಾಗಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು. ಮಜಹರ್‌ಉಲ್ಲಾ, ಯು.ಸಿ. ಗಿರೀಶ್, ಡಾ.ಸಂತೋಷ್ , ಭರತ್, ಸರ್ಕಾರಿ ಕಲಾ ಕಾಲೇಜಿನ ಪ್ರಾಂಶುಪಾಲ ಪ್ರೊ.ತಾರಿಣಿ ಶುಭದಾಯಿನಿ, ಡಾ.ಪ್ರಸಾದ್ ಇದ್ದರು.

# ಸಾಮೂಹಿಕ ವಿವಾಹ ಸಾಮಾಜಿಕ ಬದಲಾವಣೆಯ ಅಸ್ಮಿತೆ

## ಮುರುಘಾಮಠದಲ್ಲಿ ನಡೆದ ಕಲ್ಯಾಣ ಮಹೋತ್ಸವದಲ್ಲಿ ಡಾ.ಬಸವಕುಮಾರ ಸ್ವಾಮೀಜಿ ಅಭಿಮತ

• **ಕನ್ನಡಪ್ರಭ ವಾರ್ತೆ** ಚಿತ್ರದುರ್ಗ

ಮುರುಘಾಮಠದಲ್ಲಿ ಪ್ರತಿ ತಿಂಗಳು 5ನೇ ತಾರೀಕು ನಡೆಯುವ ಸಾಮೂಹಿಕ ವಿವಾಹಗಳು ಸಂಪ್ರದಾಯದ ನಡೆಯಲ್ಲ, ಬದಲಾಗಿ ಸಾಮಾಜಿಕ ಬದಲಾವಣೆ ಅಸ್ಮಿತೆ ಎಂದು ಬೃಹನ್ಮಠದ ಆಡಳಿತ ಮಂಡಳಿ ಸದಸ್ಯ ಡಾ.ಬಸವಕುಮಾರ ಸ್ವಾಮೀಜಿ ಹೇಳಿದರು.

ನಗರದ ಬಸವಕೇಂದ್ರ ಮುರುಘಾ ಮಠದ ಅನುಭವ ಮಂಟಪದಲ್ಲಿ ಮಂಗಳವಾರ ನಡೆದ ಸಾಮೂಹಿಕ ವಿವಾಹ ಕಾರ್ಯಕ್ರಮದಲ್ಲಿ ಪಾಲ್ಗೊಂಡು ವಧೂವರರಿಗೆ ಪುಷ್ಪವೃಷ್ಠಿಗೈದು ಶುಭಆರೈಸಿ ಮಾತನಾಡಿದ ಅವರು, ಯಾವುದು ಸರಳವೋ, ಯಾವುದು ಸತ್ಯವೋ ಅದು ಸುಂದರವಾಗಿರುತ್ತದೆ. ಯಾವವ್ಯಕ್ತಿತನ್ನಜೀವಿತದಲ್ಲಿಬಾಗಿನಡೆಯುತ್ತಾನೋ ಅವನ ಬದುಕು ಬಂಗಾರವಾಗಿರುತ್ತದೆ. ಸತಿ-ಪತಿಗಳಿಬ್ಬರೂ ಕೂಡ ಬಾಗಿದ ತಲೆಗೆ ಮುಗಿದ ಕೈಯಾಗಿರಬೇಕೆಂದು ಹೇಳಿದರು.

ಯಾವುದೇ ಜಾತಿ ಧರ್ಮಗಳ ಗೊಡವೆಯಿಲ್ಲದೆ ವಾರ, ತಿಥಿ, ನಕ್ಷತ್ರಗಳ ಲೆಕ್ಕಾಚಾರವಿಲ್ಲದೆ ಪ್ರತಿ ತಿಂಗಳು 5ನೇ ತಾರೀಕಿನಂದು ನಡೆಯುವ



ಚಿತ್ರದುರ್ಗದ ಬಸವಕೇಂದ್ರ ಮುರುಘಾಮಠದ ಅನುಭವ ಮಂಟಪದ ಪ್ರಾಂಗಣದಲ್ಲಿ ಮಂಗಳವಾರ ನಡೆದ ವಚನ ಮಾಂಗಲ್ಯ ಕಾರ್ಯಕ್ರಮದಲ್ಲಿ 18 ಜೋಡಿ ವಧೂವರರು ದಾಂಪತ್ಯಕ್ಕೆ ಅಡಿ ಇಟ್ಟರು.

ಸಾಮೂಹಿಕ ವಿವಾಹಗಳಿಗೆ 36 ವರ್ಷಗಳ ಇತಿಹಾಸವಿದೆ. ದೇಶ ಹಾಗೂ ತಮ್ಮ ಕುಟುಂಬದ ದುಂದುವೆಚ್ಚವನ್ನು ಕಡಿಮೆ ಮಾಡುವುದರ ಮೂಲಕ ತಾವೆಲ್ಲ ಸರಳ ವಿವಾಹಕ್ಕೆ ಅಣಿಯಾಗಿದ್ದೀರಿ. ನಿಮ್ಮ ಬದುಕು ಸುಂದರವಾಗಿರುತ್ತದೆ. ಬಸವಾದಿ ಶರಣರ ಆಶಯದಂತೆ ಶ್ರೀಮಠದಲ್ಲಿ ನಡೆಯುವ ವಚನ ಮಾಂಗಲ್ಯದಲ್ಲಿ 18 ಜೋಡಿ ವೈವಾಹಿಕ ಜೀವನಕ್ಕೆ ಸರಳ ಬದುಕಿಗೆ ಸಾಕ್ಷಿಯಾಗಿದ್ದೀರಿ. 4 ಜೋಡಿಗಳು ಅಂತರ್ಜಾತಿ ವಿವಾಹಕ್ಕೆ ಒಳಗಾಗಿದ್ದೀರಿ. ಶ್ರೀಮಠವು ಯಾವಾಗಲೂ ಸಾಮಾಜಿಕ ಸಮಾನತೆಯ ಪರ ಕಾರ್ಯನಿರ್ವಹಿಸುತ್ತಿದೆ ಎಂದರು.

ದಾವಣಗೆರೆ ವಿರಕ್ತಮಠದ ಡಾ.ಬಸವಪ್ರಭು ಸ್ವಾಮೀಜಿ ಮಾತನಾಡಿ, ಸಂಸಾರದ ಜೀವನ ಚೆನ್ನಾಗಿರಲು 4 ವಿಚಾರಗಳನ್ನು ಅಳವಡಿಸಿಕೊಂಡಿರಬೇಕು. ಪರಸ್ಪರರ ನಗು ಸಂಸಾರವನ್ನು ಸುಂದರವಾಗಿಸುತ್ತದೆ. ಸಂಸಾರದಲ್ಲಿ ಆಗುವಂತಹ ಮನಸ್ತಾಪ, ಜಗಳವನ್ನು ಮೌನ ತಪ್ಪಿಸುತ್ತದೆ. ನದಿ ದಾಟಲು ತೆಪ್ಪ ಬೇಕು. ಅದೇ ರೀತಿ ಸಂಸಾರದ ನದಿ ದಾಟಲು ತೆಪ್ಪಗಿರಬೇಕಾಗುತ್ತದೆ. ತಾಳ್ಮೆ ದಾಂಪತ್ಯ ಜೀವನದಲ್ಲಿ ಬಹಳ ಮುಖ್ಯವಾದುದು. ಇದು ಪುರುಷ ಮಹಿಳೆಯರಿಬ್ಬರಲ್ಲೂ ಇರಬೇಕು. ತಾಳ್ಮೆಯಿಂದ ಮಾತ್ರ ಸಂಸಾರವನ್ನು ಜಯಿಸಲು ಸಾಧ್ಯ. ಹಾಗಾಗಿ ಹೊಸ ಜೀವನಕ್ಕೆ ಕಾಲಿಡುತ್ತಿರುವ ದಂಪತಿಗಳು ನಗು, ಮೌನ, ವಿಶ್ವಾಸ, ತಾಳ್ಮೆಯನ್ನು ಅಳವಡಿಸಿಕೊಂಡು ಉತ್ತಮ ಬದುಕನ್ನು ಕಟ್ಟಿಕೊಳ್ಳಿ ಎಂದು ಹರಸಿದರು.

ಛಲವಾದಿ ಗುರುಪೀಠದ ಶ್ರೀ ಬಸವನಾಗೀದೇವ ಸ್ವಾಮೀಜಿ ಮಾತನಾಡಿ, ಒಂದು ಮದುವೆ ಮಾಡಲು ಆ ಕುಟುಂಬ ಎಷ್ಟೊಂದು ಕಷ್ಟ ಅನುಭವಿಸುತ್ತದೆ. ಹೀಗಿರುವಾಗ ಶ್ರೀಮಠವು ನಿರಂತರವಾಗಿ 36 ವರ್ಷಗಳಿಂದ ಪ್ರತಿ ತಿಂಗಳು ಈ ಕಾರ್ಯವನ್ನು ಮಾಡಿಕೊಂಡು ಬರುತ್ತಿದೆ. ಬಸವಾದಿ ಶರಣರ ಆದರ್ಶಗಳ ಪರಿಕಲ್ಪನೆಯಲ್ಲಿ ನಡೆಯುತ್ತಿದೆ. ಬಸವಣ್ಣನವರು ಇಷ್ಟಲಿಂಗವನ್ನು ಕೊಟ್ಟಿದ್ದಾರೆ. ಇಷ್ಟಲಿಂಗವನ್ನು ಧ್ಯಾನಿಸುವುದರ ಮೂಲಕ ಸಮಾಜದ ಸಾಮರಸ್ಯ ಮತ್ತು ಸ್ವಾಸ್ಥ್ಯವನ್ನು ಕಾಪಾಡಬೇಕೆಂದರು.

ಶಿರಸಂಗಿಯ ಬಸವ ಮಹಾಂತ ಸ್ವಾಮೀಜಿ ಮಾತನಾಡಿ, ಪುಟ್ಟ ಮಕ್ಕಳು ಕೂಡ ಮೊಬೈಲ್ ವ್ಯಾಮೋಹಕ್ಕೆ ಒಳಗಾಗುತ್ತಿದ್ದಾರೆ. ತಂದೆ-ತಾಯಂದಿರು ತಮ್ಮ ಮಕ್ಕಳಿಗೆ ಸಂಸ್ಕಾರವನ್ನು ಕಲಿಸಿ ಮೊಬೈಲ್ ವ್ಯಾಮೋಹವನ್ನು ಬಿಡಿಸಬೇಕು. ಸತಿ ಪತಿಗಳು ಪರಸ್ಪರ ನಂಬಿಕೆ ಮೂಲಕ ಸ್ನೇಹಿತರಂತೆ ಬದುಕು ಸಾಗಿಸಬೇಕು ಎಂದರು.

ಬಿಜೆಪಿ ಮುಖಂಡ ರಾಜು ಕೋರಿ, ಮೆದುಳು ಮತ್ತು ನರರೋಗ ತಜ್ಞ ಡಾ.ಸುನಿಲ್ ಕಲ್ಲೂರ ಅವರನ್ನು ಸನ್ಮಾನಿಸಲಾಯಿತು. ಬಸವಮಲ್ಲಿಕಾರ್ಜುನ ಸ್ವಾಮಿಗಳು, ಬಸವಲಿಂಗಮೂರ್ತಿ ಸ್ವಾಮಿಗಳು, ಪತ್ರಕರ್ತ ಲಿಂಗರಾಜು, ಪೈಲ್ವಾನ್ ತಿಪ್ಪೇಸ್ವಾಮಿ, ಚುಟುಕು ಕವಿ ಗಂಗಾಧರಪ್ಪ ಇದ್ದರು. ಜಮುರಾ ಕಲಾವಿದರು ಪ್ರಾರ್ಥಿಸಿದರು. ಶಿಕ್ಷಕ ಗಿರೀಶಾಚಾರ್ ಸ್ವಾಗತಿಸಿದರು. ಟಿ.ಪಿ. ಜ್ಞಾನಮೂರ್ತಿ ನಿರೂಪಿಸಿದರು.

# ಕೇಂದ್ರ ಸರ್ಕಾರದ ಸೌಲಭ್ಯ ಸಮರ್ಥ ಬಳಕೆ ಅಗತ್ಯ

## ಸಂಸದ ಗೋವಿಂದ ಕಾರಜೋಳ ಸಲಹೆ | ಕಟ್ಟಡ ಕಾರ್ಮಿಕರ ಸಂಘದಿಂದ ಕಾರ್ಮಿಕರ ದಿನಾಚರಣೆ

• **ಕನ್ನಡಪ್ರಭ ವಾರ್ತೆ** ಚಿತ್ರದುರ್ಗ

ಕಾರ್ಮಿಕರಿಗಾಗಿ ಕೇಂದ್ರ ಸರ್ಕಾರ ವಿವಿಧ ಯೋಜನೆಗಳನ್ನು ಜಾರಿಗೆ ತಂದಿದ್ದು ಸಮರ್ಪಕ ಬಳಕೆ ಮಾಡಿಕೊಳ್ಳುವುದರ ಮೂಲಕ ಅಭಿವೃದ್ಧಿ ಹೊಂದುವಂತೆ ಸಂಸದ ಗೋವಿಂದ ಎಂ. ಕಾರಜೋಳ ಸಲಹೆ ನೀಡಿದರು.

ನಗರದ ರೋಟರಿ ಬಾಲಭವನದಲ್ಲಿ ಮಂಗಳವಾರ ಜಿಲ್ಲಾ ಕಟ್ಟಡ ಕಾರ್ಮಿಕರ ಸಂಘದ ವತಿಯಿಂದ ಹಮ್ಮಿಕೊಂಡಿದ್ದ 17ನೇ ವರ್ಷದ ಕಟ್ಟಡ ಕಾರ್ಮಿಕರ ದಿನಾಚರಣೆ ಉದ್ಘಾಟಿಸಿ ಮಾತನಾಡಿದ ಅವರು, ನರೇಂದ್ರ ಮೋದಿಯವರು ಪ್ರಧಾನಿಯಾದ ಮೇಲೆ ಲಿಂಗಭೇಧ ಇಲ್ಲದೆ ಎಲ್ಲರಿಗೂ ವಿವಿಧ ರೀತಿಯ ಸೌಲಭ್ಯಗಳನ್ನು ನೀಡಿದ್ದಾರೆ. ಆದರೆ ಅವುಗಳನ್ನು ಪಡೆಯುವಲ್ಲಿ ಕಾರ್ಮಿಕರು ಹಿಂದೆ ಬೀಳುತ್ತಿದ್ದಾರೆ. ಇವರಿಗೆ ಸರಿಯಾದ ಮಾಹಿತಿ ಇರುವುದಿಲ್ಲ. ಅರ್ಜಿಯನ್ನು ಎಲ್ಲಿ ಹಾಕಬೇಕು ಎಂಬುದು ಗೊತ್ತಿರುವುದಿಲ್ಲ. ಹಾಗಾಗಿ ಸರ್ಕಾರ ಯೋಜನೆಗಳನ್ನು ಪಡೆದವರೇ ಮತ್ತೆ ಪಡೆಯುತ್ತಿದ್ದಾರೆ ಎಂದು ವಿಷಾಧಿಸಿದರು.

ಕಟ್ಟಡ ಕಾರ್ಮಿಕರು ಕೆಲಸದ ಮೇಲೆ ಬೇರೆ ಕಡೆ ಹೋಗುವ ಅನಿವಾರ್ಯತೆ ಬರುತ್ತದೆ. ಈ ಸಮಯದಲ್ಲಿ ತಮ್ಮ ಮಕ್ಕಳ ವಿದ್ಯಾಭ್ಯಾಸಕ್ಕೆ ತೊಂದರೆಯಾಗುತ್ತದೆ. ಸರ್ಕಾರದ ವತಿಯಿಂದ ನಿರ್ಮಾಣ ಮಾಡಲಾದ ವಸತಿ ನಿಲಯಗಳಲ್ಲಿ ನಿಮ್ಮ ಮಕ್ಕಳನ್ನು ಸೇರಿಸುವುದರ ಮೂಲಕ ವಿದ್ಯಾಭ್ಯಾಸ ಸುಗಮವಾಗಿ ಸಾಗುವಂತೆ ಮಾಡಬೇಕಾದ ಹೊಣೆಗಾರಿಕೆ ಪಾಲಕರ ಮೇಲಿದೆ. ಹಿಂದೆ ತಾವು ಸಮಾಜ ಕಲ್ಯಾಣ ಮಂತ್ರಿಯಾಗಿದ್ದಾಗ ರಾಜ್ಯದಲ್ಲಿ 200ಕ್ಕೂ ಹೆಚ್ಚು



ಚಿತ್ರದುರ್ಗದ ರೋಟರಿ ಬಾಲಭವನದಲ್ಲಿ ಮಂಗಳವಾರ ಹಮ್ಮಿಕೊಂಡಿದ್ದ ಕಾರ್ಮಿಕ ದಿನಾಚರಣೆಯಲ್ಲಿ ಸಂಸದ ಗೋವಿಂದ ಕಾರಜೋಳ ಬಾಲಕಾರ್ಮಿಕರ ಜಾಗೃತಿ ಮೂಡಿಸುವ ಬಿತ್ತಿಪತ್ರ ಬಿಡುಗಡೆ ಮಾಡಿದರು.

ಹಾಸ್ಟಲ್‌ಗಳನ್ನು ತಲಾ 25 ಕೋಟಿ ರು. ವೆಚ್ಚದಲ್ಲಿ ನಿರ್ಮಿಸಿದ್ದೆ. ಸರ್ಕಾರದ ವಸತಿ ನಿಲಯಗಳಲ್ಲಿ ಉತ್ತಮ ಫಲಿತಾಂಶ ಬಂದಿರುವುದು ಸಂತಸ ತಂದಿದೆ ಎಂದರು.

ಜಿಲ್ಲಾ ಕಾರ್ಮಿಕ ಅಧಿಕಾರಿ ಅನಿಲ್ ಬಾಲಚಂದ್ರ ಬಗಟಿ ಮಾತನಾಡಿ, ಹಗಲಿರುಳು ದುಡಿಯುವ ಕಾರ್ಮಿಕ ವರ್ಗದವರಿಗೆ ಸರ್ಕಾರ ವಿವಿಧ ರೀತಿಯ ಯೋಜನೆಯನ್ನು ಜಾರಿ ಮಾಡಿದೆ. ನಿಮ್ಮ ಸಂಘದ ಮೂಲಕವಾಗಲಿ, ವೈಯಕ್ತಿಕವಾಗಲಿ ಅರ್ಜಿ ಸಲ್ಲಿಸುವುದರ ಮೂಲಕ ಸರ್ಕಾರದ ಸೌಲಭ್ಯವನ್ನು ಪಡೆಯಬೇಕು. ಕಾರ್ಮಿಕ ಕಾರ್ಡ್ ಪಡೆದು ನೋಂದಣಿ ಮಾಡಿಸಬೇಕೆಂದರು.

ಅಧ್ಯಕ್ಷತೆ ವಹಿಸಿದ್ದ ಚಿತ್ರದುರ್ಗ ಜಿಲ್ಲಾ ಕಟ್ಟಡ ಕಾರ್ಮಿಕರ ಸಂಘದ ಅಧ್ಯಕ್ಷ ವೈ.ತಿಪ್ಪೇಸ್ವಾಮಿ ಮಾತನಾಡಿ, ಸರ್ಕಾರ ಕಾರ್ಮಿಕರಿಗೆ ತುಂಬಾ ಅನ್ಯಾಯವನ್ನು ಮಾಡುತ್ತಿದೆ. ಮಕ್ಕಳ ಶಿಕ್ಷಣಕ್ಕಾಗಿ ನೀಡುತ್ತಿದ್ದ ಶಿಷ್ಯ ವೇತನದಲ್ಲಿ ಕಡಿತ ಮಾಡಲಾಗಿದೆ. ಕಾರ್ಮಿಕ ಮಂಡಳಿಯಲ್ಲಿ ಹೇರಳವಾಗಿ ಹಣ ಇತ್ತು. ಇಂದಿನ ಸರ್ಕಾರ ದುರುಪಯೋಗ ಮಾಡಿಕೊಂಡಿದೆ. ನಮಗೆ ನೀಡುವ ಸೌಲಭ್ಯಗಳಲ್ಲಿ ವಂಚನೆ ಮಾಡಲಾಗುತ್ತಿದೆ ಎಂದು ದೂರಿದರು.

ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಎಚ್.ಎಸ್.ಮಹೇಶ್ವರಪ್ಪ, ಆರ್ಕಿಟೆಕ್ಚರ್ ಸಿವಿಲ್ ಎಂಜಿನಿಯರ್ ಅಸೋಸಿಯೇಷನ್ ಅಧ್ಯಕ್ಷ ಎಸ್.ಎಸ್.ಪ್ರಸಾದ್, ಚಿತ್ರದುರ್ಗ ಜಿಲ್ಲಾ ಸ್ಟೀಲ್ ವೆಲ್ಡಿಂಗ್ ಇಂಡಸ್ಟ್ರಿಯಲ್ಸ್ ಕಾರ್ಮಿಕದ ಸಂಘದ ಪ್ರಧಾನ ಕಾರ್ಯದರ್ಶಿ ವೆಂಕಟೇಶ್, ಗೌರವಾಧ್ಯಕ್ಷ ಹಾಲೇಶಪ್ಪ, ನ್ಯಾಯವಾದಿಗಳಾದ ಜಗದೀಶ್‌ಗುಂಡೇರಿ, ಶಿವಮೂರ್ತಿ, ದ್ವಿಚಕ್ರ ವಾಹನ ಮೆಕಾನಿಕ್ ಸಂಘದ ಉಪಾಧ್ಯಕ್ಷಧ ಅಣ್ಣೇಶ್, ಅಂಜಿನಪ್ಪ ಇದ್ದರು.

# ಟಿಪ್ಪು ಸುಲ್ತಾನ್ ಹುತಾತ್ಮ ದಿನ ಆಚರಣೆ



ಟಿಪ್ಪುಸುಲ್ತಾನ್ ಅಭಿಮಾನಿಗಳ ಮಹಾ ವೇದಿಕೆಯಿಂದ ಟಿಪ್ಪುಸುಲ್ತಾನ್‌ರವರ 227ನೇ ಹುತಾತ್ಮರ ದಿನ ಆಚರಿಸಲಾಯಿತು.

ಚಿತ್ರದುರ್ಗ: ಕರ್ನಾಟಕ ರಾಜ್ಯ ಟಿಪ್ಪುಸುಲ್ತಾನ್ ಅಭಿಮಾನಿಗಳ ಮಹಾ ವೇದಿಕೆಯಿಂದ ಮೈಸೂರಿನ ಹುಲಿ ಟಿಪ್ಪುಸುಲ್ತಾನ್‌ರವರ 227ನೇ ಹುತಾತ್ಮ ದಿನವನ್ನು ಚಿತ್ರದುರ್ಗದಲ್ಲಿ ಆಚರಿಸಲಾಯಿತು.

ನಗರದ ಬಡಾಮಕಾನ್‌ನಲ್ಲಿ ಗೋಡೆ ಮೇಲೆ ಚಿತ್ರಿಸಿರುವ ಟಿಪ್ಪುಸುಲ್ತಾನ್ ಹುಲಿ ಜೊತೆ ಸೆಣಸಾಡುತ್ತಿರುವ ಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಮಾತನಾಡಿದ ಕರ್ನಾಟಕ ರಾಜ್ಯ ಟಿಪ್ಪುಸುಲ್ತಾನ್ ಅಭಿಮಾನಿಗಳ ಮಹಾವೇದಿಕೆ ರಾಜ್ಯಾಧ್ಯಕ್ಷ ಟಿಪ್ಪುಖಾಸಿಂಆಲಿ, ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದು ಮೂರು ವರ್ಷಗಳಾಗಿದ್ದರೂ ಇನ್ನು ಸರ್ಕಾರದ ವತಿಯಿಂದ ಟಿಪ್ಪು ಜಯಂತಿ ಆಚರಿಸದಿರುವುದು ಟಿಪ್ಪು ಅಭಿಮಾನಿಗಳ ಮನಸ್ಸಿಗೆ ಅತೀವ ನೋವುಂಟಾಗಿದೆ. ಬಿ.ಎಸ್.ಯಡಿಯೂರಪ್ಪನವರು ರಾಜ್ಯದ ಮುಖ್ಯಮಂತ್ರಿಯಾದಾಗ ಟಿಪ್ಪು ಜಯಂತಿ ರದ್ದುಪಡಿಸಿದರು. ಈಗ ಕಾಂಗ್ರೆಸ್ ಸರ್ಕಾರವಿದೆ. ಟಿಪ್ಪು ಜಯಂತಿಯನ್ನು ಸರ್ಕಾರದಿಂದ ಏಕೆ ಆಚರಿಸಬಾರದೆಂದು ಪ್ರಶ್ನಿಸಿದರು. ಈ ಸಂದರ್ಭದಲ್ಲಿ ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿಗಳಾದ ಮಹಮದ್ ಚಾಂದ್‌ಪೀರ್, ಎ.ಸಾಧಿಕ್‌ವುಲ್ಲಾ, ಪ್ರಚಾರ ಸಮಿತಿ ಅಧ್ಯಕ್ಷ ತಾಹೀರ್, ಕರುನಾಡ ರಕ್ಷಣಾ ವೇದಿಕೆ ಅಧ್ಯಕ್ಷ ಸೈಯದ್ ಇಸ್ಮಾಯಿಲ್, ತಬ್ರೇಜ್ ಬಡಾಮಕಾನ್, ಇಂಟೆಕ್ ಮಾಜಿ ಅಧ್ಯಕ್ಷ ಸೈಯದ್ ಸೈಫುಲ್ಲಾ, ಇಮ್ತಿಯಾಜ್ ಅನೇಕರಿದ್ದರು.

# ಕನ್ನಡ ಕಟ್ಟುವ ಕೆಲಸವಾಗಲಿ: ಶಿಕ್ಷಣಾಧಿಕಾರಿ ನಿರ್ಮಲಾದೇವಿ

ಮೊಳಕಾಲ್ಮೂರು: ಸುಭದ್ರ ರಾಷ್ಟ್ರ ಕಟ್ಟುವಂತ ಯುವಕರು ನಾಡಿನಲ್ಲಿ ಕನ್ನಡವನ್ನು ಬಲವಾಗಿ ಕಟ್ಟುವ ಕೆಲಸ ಆಗಬೇಕೆಂದು ಕ್ಷೇತ್ರ ಶಿಕ್ಷಣಾಧಿಕಾರಿ ನಿರ್ಮಲಾದೇವಿ ಹೇಳಿದರು. ಪಟ್ಟಣದ ಪ್ರಥಮ ದರ್ಜೆ ಕಾಲೇಜಿನಲ್ಲಿ ತಾಲೂಕು ಕನ್ನಡ ಸಾಹಿತ್ಯ ಪರಿಷತ್‌ನಿಂದ ಮಂಗಳವಾರ ಆಯೋಜಿಸಲಾಗಿದ್ದ ಕನ್ನಡ ಸಾಹಿತ್ಯ ಪರಿಷತ್ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದರು.

ವಿಶ್ವದಲ್ಲಿ ಕನ್ನಡಕ್ಕೆ ವಿಶಿಷ್ಟ ಸ್ಥಾನ ಮಾನವಿದೆ. ಇಲ್ಲಿನ ಸಂಸ್ಕೃತಿ ಮತ್ತು ಆಚರಣೆ ವಿಭಿನ್ನವಾದುದು. ಪ್ರಾಚೀನ ಸ್ಥಾನಮಾನ ಹೊಂದಿದ್ದರೂ ಬೇರೆ ಬೇರೆ ಭಾಷೆಗಳಿಂದಾಗಿ ಕನ್ನಡ ಭಾಷೆ ಹರಿದು ಹಂಚಿಹೋಗುವಂತಾಗಿದೆ. ಅನ್ಯ ಭಾಷಿಕರಿಂದಾಗಿ ಕನ್ನಡ ಕಲಸೋಗರವಾಗುತ್ತಿದೆ. ಸದೃಢ ಸಮಾಜ ಕಟ್ಟುವ ಶಕ್ತಿ ಇರುವ ಯುವಕರಿಗೆ ಭಾಷಾಭಿಮಾನ ಇರಬೇಕು. ಎಲ್ಲರನ್ನೂ ಪ್ರೀತಿಯಿಂದ ಸಲಹುವಂತ ಕನ್ನಡ ನಾಡಿನಲ್ಲಿ ಕನ್ನಡವನ್ನು ಉಳಿಸಿ ಬೆಳೆಸುವ ಕೆಲಸವಾಗಬೇಕೆಂದು ತಿಳಿಸಿದರು. ಇದೇ ವೇಳೆ ಬಳ್ಳಾರಿ ಪ್ರಥಮ ದರ್ಜೆ ಕಾಲೇಜಿನ ಉಪನ್ಯಾಸಕ ಶ್ಯಾಮಣ್ಣ ಮಾತನಾಡಿದರು. ಈ ಸಂದರ್ಭದಲ್ಲಿ ಕಸಾಪ ಅಧ್ಯಕ್ಷ ಜಿಂಕಾ ಶ್ರೀನಿವಾಸ, ಕಾರ್ಯದರ್ಶಿ ಬಡಯ್ಯ, ಹಿರಿಯ ವಕೀಲರಾದ ಎಂ.ಎನ್.ವಿಜಯಲಕ್ಷ್ಮಿ, ರಾಜಶೇಖರ ನಾಯಕ, ಪ್ರಥಮ ದರ್ಜೆ ಕಾಲೇಜು ಪ್ರಾಂಶುಪಾಲ ವೈ. ಲಿಂಗೇಶ್ವರ, ಶ್ರೀರಾಮುಲು, ಶ್ರೀಧರ ನಾಯಕ, ಗಂಗಾಧರಪ್ಪ, ಉಪನ್ಯಾಸಕರಾದ ಯೋಗಾನಂದ, ಬಸವರಾಜ, ನಿವೃತ್ತ ಅರಣ್ಯಾಧಿಕಾರಿ ವೆಂಕಟೇಶ್ ಇದ್ದರು.

# ಕನ್ನಡ ನಾಡಿನ ನೆಲ ಜಲ ಸಂಪತ್ತಿನ ರಕ್ಷಣೆ ಎಲ್ಲರ ಹೊಣೆ: ಸುರೇಶ್

## ಕನ್ನಡ ಸಾಹಿತ್ಯ ಪರಿಷತ್ತಿನ 111ನೇ ಸಂಸ್ಥಾಪನಾ ದಿನಾಚರಣೆ



ಕಸಾಪ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮದಲ್ಲಿ ಭೀಮನಬಂಡೆ ಗ್ರಾಮದ ಯಾಜ್ಞವಲ್ಕ್ಯ ಪಬ್ಲಿಕ್ ಶಾಲೆ ವಿದ್ಯಾರ್ಥಿಗಳಿಗೆ ಶಾಲಾ ಬ್ಯಾಗ್‌ಗಳನ್ನು ವಿತರಿಸಲಾಯಿತು.

• **ಕನ್ನಡಪ್ರಭ ವಾರ್ತೆ** ಹಿರಿಯೂರು

ನಾಡಿನ ನೆಲ, ಜಲ ಸಂಪತ್ತು ಭಾಷೆ ರಕ್ಷಣೆ ಮಾಡುವುದು ಪ್ರತಿಯೊಬ್ಬರ ಕರ್ತವ್ಯವಾಗಿದೆ ಎಂದು ಯಾಜ್ಞವಲ್ಕ್ಯ ಶಾಲೆಯ ಸಂಸ್ಥಾಪಕ ಅಧ್ಯಕ್ಷರ ಟಿ. ಸುರೇಶ್ ಹೇಳಿದರು.

ತಾಲೂಕಿನ ಭೀಮನಬಂಡೆ ಗ್ರಾಮದ ಯಾಜ್ಞವಲ್ಕ್ಯ ಪಬ್ಲಿಕ್ ಶಾಲೆಯಲ್ಲಿ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತು ಹಾಗೂ ಯಾಜ್ಞವಲ್ಕ್ಯ ವಿದ್ಯಾ ಸಂಸ್ಥೆಯ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ ಕನ್ನಡ ಸಾಹಿತ್ಯ ಪರಿಷತ್ತಿನ 112ನೇ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕನ್ನಡ ಭಾಷೆಗೆ 2000 ವರ್ಷಗಳ ಇತಿಹಾಸವಿದ್ದು ತಾಯಿಯ ಭಾಷೆಯಾದ ಕನ್ನಡವನ್ನು ಉಳಿಸಿ ಬೆಳೆಸಲು 1,915 ಮೇ 5ರಂದು

ಶ್ರೀ ನಾಲ್ವಡಿ ಕೃಷ್ಣರಾಜ ಒಡೆಯರ್, ಸರ್‌ಮಿರ್ಜಾ ಇಸ್ಮಾಯಿಲ್, ಸರ್‌ಎಂ. ವಿಶ್ವೇಶ್ವರಯ್ಯನವರು ಜೊತೆಗೂಡಿ ಕನ್ನಡ ಸಾಹಿತ್ಯ ಪರಿಷತ್ತನ್ನು ಕಟ್ಟಿದರು. ಅಂದಿನಿಂದ ಇಲ್ಲಿಯವರೆಗೆ ಕನ್ನಡ ಸಾಹಿತ್ಯ ಪರಿಷತ್ತು ಹಲವು ಘಟಕಗಳನ್ನು ಆರಂಭಿಸುವ ಮೂಲಕ ಜಿಲ್ಲಾ ಮಟ್ಟದ, ತಾಲೂಕು, ಹೋಬಳಿ ಮಟ್ಟದ ಕನ್ನಡ ಸಾಹಿತ್ಯ ಸಮ್ಮೇಳನಗಳನ್ನು ಆಯೋಜನೆ ಮಾಡುವ ಮೂಲಕ ಸ್ಥಳೀಯ ಸಾಹಿತಿಗಳನ್ನು ಗುರುತಿಸಿ ಗೌರವಿಸುವ ಕೆಲಸವನ್ನು ಮಾಡುತ್ತ ಬಂದಿದೆ. ಜೊತೆಗೆ ಯುವ ಬರಹಗಾರರಿಗೆ ಕವಿಗೋಷ್ಠಿ ವಿಚಾರ ಸಂಕಿರಣ ಹೀಗೆ ಹಲವು ಕಾರ್ಯಕ್ರಮಗಳನ್ನು ಮಾಡುತ್ತಾ ಸಾಹಿತಿಗಳನ್ನು ಪ್ರೋತ್ಸಾಹಿಸುತ್ತಾ ಬಂದಿದೆ ಎಂದರು. ಇದೇ ವೇಳೆ ಕರ್ನಾಟಕ ಜಾನಪದ ಪರಿಷತ್ ತಾಲೂಕು ಘಟಕದ ಅಧ್ಯಕ್ಷ ಎಸ್.ಜಿ.ರಂಗಸ್ವಾಮಿ ಸಕ್ಕರ, ಸಾಹಿತಿ ಎಚ್.ಶಫಿವುಲ್ಲಾ ಮಾತನಾಡಿದರು. ತಾಲೂಕು ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಸಿ ರಾಮಚಂದ್ರಪ್ಪ, ಸಾಹಿತ್ಯ ಪರಿಷತ್ ಜಿಲ್ಲಾ ಸಲಹಾ ಸಮಿತಿ ಸದಸ್ಯ ಹರ್ತಿ ಕೋಟೆ ಮಹಾಸ್ವಾಮಿ, ಜಿ ಶ್ರೀನಿವಾಸ್ ಮೂರ್ತಿ, ಯು. ಹರ್ಷ, ಮಹಾಂತೇಶ್, ನರಸಿಂಹಮೂರ್ತಿ, ಸುಗುಣ, ವರದೇಗೌಡ, ಸುರೇಶ್, ನವೀನ್ ಪ್ರಭು, ಹಂಸ ಶಂಕರ್ ಉಪಸ್ಥಿತರಿದ್ದರು.


ಅಭಿಮಾನ | ಕಸಾಪ ಅಧ್ಯಕ್ಷ ವೀರಭದ್ರಸ್ವಾಮಿ ಅಭಿಮತ | ಕನ್ನಡ ಸಾಹಿತ್ಯ ಪರಿಷತ್ ಸಂಸ್ಥಾಪನಾ ದಿನಾಚರಣೆ

# ನಾಡು, ನುಡಿ ವಿಚಾರದಲ್ಲಿ ಹಿರಿಯರ ಸೇವೆ ಸ್ಮರಿಸುವುದು ಅಗತ್ಯ

• **ಕನ್ನಡಪ್ರಭ ವಾರ್ತೆ** ಚಳ್ಳಕೆರೆ

ಕನ್ನಡ ನಾಡು, ನುಡಿ ವಿಚಾರದಲ್ಲಿ ಹಿರಿಯರ ಕನ್ನಡಪರ ಸೇವೆಯನ್ನು ಇಂದಿನ ಯುವಜನತೆ ನೆನೆಯಬೇಕು. ಆ ಮೂಲಕ ಕನ್ನಡತನವನ್ನು ಮನೆ ಮನಗಳಲ್ಲಿ ಇರುವಂತೆ ಮಾಡಬೇಕು ಎಂದು ತಾಲೂಕು ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಜಿ.ಟಿ.ವೀರಭದ್ರಸ್ವಾಮಿ ಹೇಳಿದರು.

ನಗರದ ಎಚ್‌ಪಿಪಿಸಿ ಕಾಲೇಜಿನಲ್ಲಿ ತಾಲೂಕು ಕನ್ನಡ ಸಾಹಿತ್ಯ ಪರಿಷತ್ ನೇತೃತ್ವದಲ್ಲಿ ಆಯೋಜಿಸಿದ್ದ ಕನ್ನಡ ಸಾಹಿತ್ಯ ಪರಿಷತ್ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ನಾಡು, ನುಡಿ, ನೆಲ, ಜಲ ಸಂಸ್ಕೃತಿ ಸಂಪ್ರದಾಯಗಳ ರಕ್ಷಣೆಗಾಗಿ ಕಳೆದ 112 ವರ್ಷಗಳ ಹಿಂದೆ ಸ್ಥಾಪನೆಗೊಂಡ ಕನ್ನಡ ಸಾಹಿತ್ಯ ಪರಿಷತ್‌ನ ಅವಿರತ ಸೇವೆ ಅವಿಸ್ಮರಣೀಯ. ಕಥೆ, ಕಾದಂಬರಿಗಳನ್ನು ಓದುವ ಹವ್ಯಾಸವನ್ನು ವಿದ್ಯಾರ್ಥಿಗಳು ರೂಢಿಸಿಕೊಳ್ಳ ಬೇಕಿದೆ. ಕನ್ನಡ ನಾಡು, ನುಡಿ ವಿಚಾರಗಳನ್ನು ಬೆಳೆಸುವ ದೃಷ್ಟಿಯಿಂದ



ಚಳ್ಳಕೆರೆ ನಗರದ ಎಚ್‌ಪಿಪಿಸಿ ಕಾಲೇಜಿನಲ್ಲಿ ಕನ್ನಡ ಸಾಹಿತ್ಯ ಪರಿಷತ್ ಆಯೋಜಿಸಿದ್ದ ಕಸಾಪ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮವನ್ನು ಪ್ರಾಂಶುಪಾಲ ಡಾ.ಎಂ.ಕೆ ದೇವಪ್ಪ ಉದ್ಘಾಟಿಸಿದರು.

ನಾಲ್ವಡಿ ಕೃಷ್ಣರಾಜ ಒಡೆಯರ್ ಸ್ಥಾಪಿಸಿದ ಕಸಾಪ ಇಂದು ಕನ್ನಡಭಾಷೆ ರಕ್ಷಣೆಗೆ ಟೊಂಕಕಟ್ಟಿ ನಿಂತಿದ್ದು, ಭಾಷೆ ಉಳಿಸುವ ಕೆಲಸವನ್ನು ನಾವೆ ಲ್ಲರೂ ಮಾಡಬೇಕಿದೆ. ಇಂಗ್ಲಿಷ್ ಸಂಸ್ಕೃತಿ ಯಿಂದ ಹೊರಬಂದು ತಾಯಿ ಭಾಷೆ ಕನ್ನಡಕ್ಕೆ ಮೊದಲ ಪ್ರಾಶಸ್ತ್ಯ ನೀಡುವ ಸಂಸ್ಕೃತಿ ನಮ್ಮಲ್ಲಿ ಬೆಳೆಯಬೇಕಿದೆ ಎಂದರು. ಇಂದಿನ ವಿದ್ಯಾರ್ಥಿಗಳು ಕನ್ನಡಾಭಿಮಾನ ದಿಂದ ದೂರವಾಗುತ್ತಿರುವುದು ಆತಂಕದ ಸಂಗತಿ. ಇತ್ತೀಚೆಗೆ ನಡೆದ ಎಸ್‌ಎಲ್‌ಸಿ ಫಲಿತಾಂಶದಲ್ಲಿ ಕನ್ನಡದಲ್ಲಿ ಅತಿ ಹೆಚ್ಚು ವಿದ್ಯಾರ್ಥಿಗಳು ಅನುತ್ತೀರ್ಣರಾಗಿರುವುದು ಬೇಸರದ ಸಂಗತಿ ಎಂದರು. ಕಾಲೇಜು ಪ್ರಾಂಶುಪಾಲ ಡಾ.ಎಂ.ಕೆ.ದೇವಪ್ಪ ಮಾತನಾಡಿ, ಆಧುನಿಕತೆ ಹೆಸರಿನಲ್ಲಿ ಕಾನ್ವೆಂಟ್ ಸಂಸ್ಕೃತಿ ಹೆಚ್ಚುತ್ತಿದೆ. ಕನ್ನಡ ಶಾಲೆಗಳು ದಾಖಲಾತಿ ಇಲ್ಲದೆ ನಿಧಾನವಾಗಿ ನೇಪತ್ಯಕ್ಕೆ ಸರಿಯುತ್ತಿವೆ. ಸಾಕಷ್ಟು ಶಾಲೆಗಳು ಮುಚ್ಚಿವೆ. ಈಗಿನ ವಿದ್ಯಾರ್ಥಿಗಳಲ್ಲೂ ಸಹ ಕನ್ನಡ ಕಲಿಯುವ ಮನಸ್ಸು ಕ್ಷೀಣಿಸುತ್ತಿರುವುದು ನೋವಿನ ಸಂಗತಿ.

ಮಾತೃಭಾಷೆಗೆ ಮೊದಲ ಸ್ಥಾನ ನೀಡುವ ಇತರೆ ರಾಜ್ಯಗಳಂತೆ ಕನ್ನಡಕ್ಕೂ ಸಹ ಮೊದಲ ಸ್ಥಾನ ನೀಡುವ ಸಂಸ್ಕೃತಿ ಯುವ ಮನಸುಗಳಲ್ಲಿ ಬೆಳೆಯಬೇಕಿದೆ. ಪುಸ್ತಕ ಓದುವುದು, ಗ್ರಂಥಗಳ ಅಧ್ಯಯನ ಮಾಡುವುದು, ಮಹಾನ್ ಕವಿಗಳ ವಿಚಾರವಂತಿಕೆಯನ್ನು ಅರ್ಥೈಸಿಕೊಳ್ಳುವ ಪರಿಪಾಠ ವಿದ್ಯಾರ್ಥಿಗಳು ರೂಡಿಸಿಕೊಳ್ಳಬೇಕು. ವೈಜ್ಞಾನಿಕ ಕಥೆ, ಕಾದಂಬರಿಗಳನ್ನು ಹೆಚ್ಚು ಹೆಚ್ಚು ಅಭ್ಯಾಸ ಮಾಡುವುದರಿಂದ ಸಾಮಾಜಿಕ ವ್ಯವಸ್ಥೆ ಬಗ್ಗೆ ಅರಿಯಲು ಸಹಕಾರಿಯಾಗಲಿದೆ ಎಂದರು.

ಪ್ರಾಧ್ಯಾಪಕ ಡಾ.ಜಗನ್ನಾಥ ಮಾತನಾಡಿ, ಕನ್ನಡ ಭಾಷೆ ಉಳಿವಿಗಾಗಿ ಕನ್ನಡ ಸಾಹಿತ್ಯ ಪರಿಷತ್ ಸಾಹಿತ್ಯ ಸಪ್ತಾಹ, ಸಾಹಿತ್ಯ ಸಂಪದ, ದತ್ತಿ ಉಪನ್ಯಾಸ, ನಾಟಕ ಹೀಗೆ ಹಲವಾರು ಕಾರ್ಯಕ್ರಮಗಳ ಮೂಲಕ ಭಾಷಾಭಿಮಾನ ವೃದ್ಧಿಸಿ, ಕನ್ನಡದ ಅಸ್ಮಿತೆಯನ್ನು ಕಾಪಾಡಿಕೊಂಡು ಬಂದಿದೆ. ಅದರಂತೆ ಯುವ ಮನಸುಗಳು ಸಹ ಕನ್ನಡದ ಬಗ್ಗೆ ಹೆಚ್ಚು ಅಭಿಮಾನವನ್ನು ಹೊಂದಬೇಕು ಎಂದರು.

ಕಾರ್ಯಕ್ರಮದಲ್ಲಿ ನೃತ್ಯನಿಕೇತನ ಸಂಚಾಲಕ ಯು.ಎಸ್.ವಿಷ್ಣುಮೂರ್ತಿರಾವ್, ಶಿಕ್ಷಕ ಎಚ್.ಮಂಜುನಾಥ ಮಾತನಾಡಿದರು. ಕರ್ನಾಟಕ ರಕ್ಷಣ ವೇದಿಕೆ (ಪ್ರವೀಣ್ ಶೆಟ್ಟಿ ಬಣ) ಅಧ್ಯಕ್ಷ ಪಿ.ಮಂಜುನಾಥ, ಕಸಾಪ ಈರಣ್ಣ, ಎಂ.ಎನ್.ಮೃತ್ಯುಂಜಯ, ಬಸವರಾಜು, ನಾಗರಾಜು, ಜಗನ್ನಾಥ ಉಪಸ್ಥಿತರಿದ್ದರು.

## ಸುದ್ದಿ ಸಿಂಚನ

### ರಸ್ತೆ ಸರಿಪಡಿಸಲು ಆಗ್ರಹ



**ಹಿರಿಯೂರು:** ತಾಲೂಕಿನ ಬಿದರಕೆರೆ ಗ್ರಾಮದಿಂದ ರಂಗೇನಹಳ್ಳಿಗೆ ಹೋಗುವ ರಸ್ತೆಯಲ್ಲಿ ಬಿದರಕೆರೆ ಗ್ರಾಮದ ಬಳಿ ಟಾರು ರಸ್ತೆಯ ಒಂದು ಭಾಗ ಕುಸಿದಿದ್ದು ಸುಮಾರು 2-3 ಅಡಿಯಷ್ಟು ಆಳದ ಗುಂಡಿಗಳು ಬಿದ್ದಿವೆ. ಹತ್ತಾರು ಬಸ್ಸು, ಟ್ರ್ಯಾಕ್ಟರ್, ದ್ವಿಚಕ್ರ ವಾಹನಗಳು ದಿನಂಪ್ರತಿ ಸಂಚರಿಸುವುದರಿಂದ ರಸ್ತೆಯ ಗುಂಡಿಯನ್ನು ಅನಾಹುತಕ್ಕೂ ಮುನ್ನ ಸರಿಪಡಿಸಿ ಎಂದು ಬಿದರಕೆರೆ ಗ್ರಾಮಸ್ಥರು ಸಂಬಂಧಪಟ್ಟ ಇಲಾಖೆಯನ್ನು ಒತ್ತಾಯಿಸಿದ್ದಾರೆ.

### ಕನಸಿಗೆ ಜೀವ ತುಂಬುವುದೇ ಬೇಸಿಗೆ ಶಿಬಿರದ ಉದ್ದೇಶ

**ದಾವಣಗೆರೆ:** ಬೇಸಿಗೆ ಎಂದರೆ ಬರೀ ರಜೆ ಅಲ್ಲ, ಅದು ಹೊಸ ವಿಷಯ ಕಲಿಸುವ, ಹೊಸ ಸ್ನೇಹಿತರನ್ನು ಪರಿಚಯಿಸುವ, ಮಕ್ಕಳ ಪ್ರತಿಭೆಗಳನ್ನು ಅನಾವರಣಗೊಳಿಸುವ ಅಮೂಲ್ಯ ಅವಕಾಶವಾಗಿದೆ. ಈ ಶಿಬಿರದಲ್ಲಿ ಮಕ್ಕಳ ಕನಸುಗಳಿಗೆ ಜೀವ ತುಂಬುವುದೇ ಬೇಸಿಗೆ ಶಿಬಿರದ ಉದ್ದೇಶವಾಗಿದೆ ಎಂದು ಮಹಿಳಾ ಮತ್ತು ಕಲ್ಯಾಣ ಇಲಾಖೆ ಜಿಲ್ಲಾ ನಿರೂಪಣಾಧಿಕಾರಿ ಎನ್.ಗುರುಪ್ರಸಾದ್ ಹೇಳಿದರು. ಜಿಲ್ಲಾ ಬಾಲಭವನದಲ್ಲಿ ಮಹಿಳಾ ಮತ್ತು ಕಲ್ಯಾಣ ಇಲಾಖೆಯ ಮಂಗಳವಾರ ಆಯೋಜಿಸಿರುವ ಜಿಲ್ಲಾ ಮಟ್ಟದ 15 ದಿನಗಳ ಉಚಿತ ಬೇಸಿಗೆ ಶಿಬಿರ ಉದ್ಘಾಟಿಸಿ ಅವರು ಮಾತನಾಡಿದರು. ಪಠ್ಯ ಪುಸ್ತಕ ಹೊರತಾದ ಜೀವನದ ಅನೇಕ ಕೌಶಲ್ಯಗಳನ್ನು ಕಲಿಯುವ ಅವಕಾಶ ಈ ಶಿಬಿರದಲ್ಲಿದೆ. ಶಿಬಿರದಲ್ಲಿ ಪಾಲ್ಗೊಳ್ಳುವ ಮಕ್ಕಳು ಸೃಜನಶೀಲತೆ, ನಾಯಕತ್ವ, ತಂಡದ ಮನೋಭಾವ, ಆತ್ಮವಿಶ್ವಾಸದಂತಹ ಮಹತ್ವದ ಗುಣಗಳನ್ನು ಬೆಳೆಸಿಕೊಳ್ಳುತ್ತಾರೆ. ಆದ್ದರಿಂದ ಈ ಉಚಿತ ಶಿಬಿರದ ಅವಕಾಶ ಮಕ್ಕಳು ಮತ್ತು ಪೋಷಕರು ಸದುಪಯೋಗ ಮಾಡಿಕೊಳ್ಳಲಿ ಎಂದರು. ದಾವಣಗೆರೆ ಸೈನ್ಸ್ ಫೌಂಡೇಶನ್‌ನ ಕಾರ್ಯಕ್ರಮ ಸಂಯೋಜಕ ಎಂ.ಗುರುಸಿದ್ದಸ್ವಾಮಿ ಮಾತನಾಡಿ, ಪ್ರತಿ ಮಗುವಿನಲ್ಲೂ ವಿಶಿಷ್ಟ ಪ್ರತಿಭೆ ಅಡಗಿದೆ. ಕೆಲವರು ಚಿತ್ರಕಲೆ, ಸಂಗೀತ, ಮತ್ತಿತರರು ನಾಟಕ, ಕ್ರೀಡಾ, ವಿಜ್ಞಾನ ವಿಷಯಗಳಲ್ಲಿ ಆಸಕ್ತಿ ಮತ್ತು ಕುತೂಹಲ ಹೊಂದಿರುತ್ತಾರೆ. ಅಂತಹ ಪ್ರತಿಭೆಗಳನ್ನು ಗುರುತಿಸಿ ಪ್ರೋತ್ಸಾಹಿಸುವುದೇ ಬೇಸಿಗೆ ಶಿಬಿರದ ಮುಖ್ಯ ಉದ್ದೇಶ ಎಂದು ಹೇಳಿದರು. ಮಹಿಳಾ ಮತ್ತು ಮಕ್ಕಳ ಕಲ್ಯಾಣಾಧಿಕಾರಿ ಪೂರ್ಣಿಮಾ ಅಧ್ಯಕ್ಷತೆ ಕಾರ್ಯಕ್ರಮದಲ್ಲಿ ಪರಿವೀಕ್ಷಣಾಧಿಕಾರಿ ಮಾಲತಿ ಹೊಸಗೌಡರು, ಜಿಲ್ಲಾ ಬಾಲಭವನದ ಎಸ್.ಬಿ.ಶಿಲ್ಪ, ಲತಾ, ಸಂಪನ್ಮೂಲ ವ್ಯಕ್ತಿ ಎನ್.ಕೆ.ಲತಾ ಹಾಗೂ ಶಿಬಿರಾರ್ಥಿಗಳು ಇದ್ದರು.

### ಬಿಐಇಟಿಯಲ್ಲಿ ಟೆಕ್ಸ್ ಕ್ರಿಯೇಟಿವ್ ರಾಷ್ಟ್ರೀಯ ವಿಚಾರ ಸಂಕಿರಣ

**ದಾವಣಗೆರೆ:** ನಗರದ ಬಾಪೂಜಿ ಎಂಜಿನಿಯರಿಂಗ್ ಮತ್ತು ತಾಂತ್ರಿಕ ಮಹಾವಿದ್ಯಾಲಯ ಮತ್ತು ಜವಳಿ ತಂತ್ರಜ್ಞಾನ ವಿಭಾಗದಿಂದ ಇತ್ತೀಚೆಗೆ ರಾಷ್ಟ್ರೀಯ ವಿಚಾರ ಸಂಕಿರಣ ಟೆಕ್ಸ್ ಕ್ರಿಯೇಟಿವ್-2026 ನಡೆಯಿತು. ಕಾರ್ಯಕ್ರಮದಲ್ಲಿ ಮಹಾರಾಷ್ಟ್ರ, ತಮಿಳುನಾಡು, ಆಂಧ್ರಪ್ರದೇಶ ಮತ್ತು ಕರ್ನಾಟಕದ ಜವಳಿ ತಂತ್ರಜ್ಞಾನ ಹಾಗೂ ಫ್ಯಾಷನ್ ಕಾಲೇಜುಗಳಿಂದ ವಿದ್ಯಾರ್ಥಿಗಳುನ್ನು ಆಹ್ವಾನಿಸಲಾಗಿತ್ತು. ಜವಳಿ ತಂತ್ರಜ್ಞಾನ ಮತ್ತು ಸಿದ್ಧ ಉಡುಪು ತಯಾರಿಕೆಯಲ್ಲಿ ಆಗುತ್ತಿರುವ ಹೊಸ ಹೊಸ ಅವಿಷ್ಕಾರಗಳು ಮತ್ತು ಕೃತಕ ಬುದ್ಧಿಮತ್ತೆಯ ಉಪಯೋಗ ಮತ್ತು ಸುಸ್ಥಿರ ಅಭಿವೃದ್ಧಿ ಇವುಗಳನ್ನು ಕುರಿತು ವಿದ್ಯಾರ್ಥಿಗಳು ಪ್ರಬಂಧ ಮಂಡಿಸಿದರು. ವಿಭಾಗದ ಮುಖ್ಯಸ್ಥ ಡಾ.ವೈ.ಎನ್.ದಿನೇಶ್ ಅಧ್ಯಕ್ಷತೆ ಕಾರ್ಯಕ್ರಮದಲ್ಲಿ ಬೆಂಗಳೂರಿನ ಲಗೂನ ಕಂಪನಿ ಮುಖ್ಯಸ್ಥ ವಿನಾಯಕ ಪೈ, ಶಿವಮೊಗ್ಗದ ಹಿತೇಶ್ ದಾಸ್, ಚೈತನ್ಯ ಕುಮಾರ, ಕಾಲೇಜಿನ ಪ್ರಾಚಾರ್ಯ ಡಾ. ಎಚ್.ಬಿ. ಅರವಿಂದ್, ನಿರ್ದೇಶಕ ಪ್ರೊ.ವೈ.ವೃಷಭೇಂದ್ರಪ್ಪ, ಜವಳಿ ತಂತ್ರಜ್ಞಾನ ವಿಭಾಗದ ಉಪನ್ಯಾಸಕರು, ವಿದ್ಯಾರ್ಥಿಗಳು ಭಾಗವಹಿಸಿದ್ದರು. ಮಹರಾಷ್ಟ್ರದ ಇಚಲಕಾರಂಜಿಯ ವಿದ್ಯಾರ್ಥಿನಿ ಮೊದಲ ಬಹುಮಾನ, ಹುಲುಕೋಟೆಯ ಆರ್‌ಇಸಿ ಕಾಲೇಜಿನ ವಿದ್ಯಾರ್ಥಿ ಎರಡನೇ ಬಹುಮಾನ, ತಮಿಳುನಾಡಿನ ಕೆಎಸ್‌ಆರ್‌ಕಾಲೇಜು ಹಾಗೂ ದಾವಣಗೆರೆಯ ಬಿಐಇಟಿ ವಿದ್ಯಾರ್ಥಿಗಳು ಮೂರನೇ ಬಹುಮಾನ ಗಳಿಸಿದರು.

# ಒಳಮೀಸಲಾತಿ ಹೆಸರಲ್ಲಿ ದಾರಿ ತಪ್ಪಿಸಿದ ಕಾಂಗ್ರೆಸ್

## ಮಾದಿಗ ಸಮುದಾಯದ ಮುಖಂಡರ ಸಭೆಯಲ್ಲಿ ಕೇಂದ್ರದ ಮಾಜಿ ಸಚಿವ ಎ.ನಾರಾಯಣಸ್ವಾಮಿ ಆರೋಪ

• **ಕನ್ನಡಪ್ರಭ ವಾರ್ತೆ** ಚಿತ್ರದುರ್ಗ

ಒಳ ಮೀಸಲು ಕಲ್ಪಿಸುವ ನಿಟ್ಟಿನಲ್ಲಿ ಪರಿಶಿಷ್ಟರನ್ನು ಕಾಂಗ್ರೆಸ್ ಹಾದಿತಪ್ಪಿಸಿದೆ ಎಂದು ಕೇಂದ್ರದ ಮಾಜಿ ಸಚಿವ ಎ.ನಾರಾಯಣಸ್ವಾಮಿ ಆರೋಪಿಸಿದರು.

ಬಿಎಸ್‌ವೈ ಅಭಿಮಾನೋತ್ಸವದ ಹಿನ್ನಲೆ ಮಂಗಳವಾರ ಇಲ್ಲಿನ ವಾಲ್ಮೀಕಿ ಭವನದಲ್ಲಿ ಆಯೋಜಿಸಲಾದ ಮಾದಿಗ ಸಮುದಾಯದ ಸಭೆ ಉದ್ಘಾಟಿಸಿ ಮಾತನಾಡಿದ ಅವರು, ಸಿದ್ದರಾಮಯ್ಯ ಒಂದೆಡೆ ದಲಿತರ ತುಳಿದರೆ ಸಚಿವ ಮಹದೇವಪ್ಪ ರೋಸ್ಟರ್ ಪದ್ಧತಿಗೆ ಬೆಂಕಿ ಇಟ್ಟರು. ಕೋರ್ಟ್ ಆದೇಶ ಧಿಕ್ಕರಿಸಿ ಒಳ ಮೀಸಲಾತಿಯ ದಿಕ್ಕು ತಪ್ಪಿಸಿದರೆಂದು ದೂರಿದರು.

ಕರುನಾಡಿಗೆ ಯಡಿಯೂರಪ್ಪ ಅವರ ಕೊಡುಗೆ ಅಪಾರ. ಗ್ರಾಮೀಣ ಭಾಗದ ದಲಿತ ಕಾಲೋನಿಗಳಲ್ಲಿ ಸಿಸಿರಸ್ತೆ ನಿರ್ಮಾಣ ಮಾಡಿದ್ದು ಬಿಜೆಪಿ ಸರ್ಕಾರ. ಅಂಬೇಡ್ಕರ್ ಭವನ, ಜಗಜೀವನರಾಂ ಭವನ ನಿರ್ಮಿಸಿದ್ದು ಕೂಡಾ ಬಿಜೆಪಿ ಸರ್ಕಾರವೇ ಆಗಿದೆ. ದಲಿತರ ವಿದ್ಯಾರ್ಥಿ ವೇತನವನ್ನು 200ರಿಂದ ಸಾವಿರ ರು.ಗೆ ಹೆಚ್ಚಳ ಮಾಡಲಾಯಿತು. ಮೊರಾರ್ಜಿ ದೇಸಾಯಿ ವಸತಿ ಶಾಲೆ, ಕಿತ್ತೂರುರಾಣಿ ಚೆನ್ನಮ್ಮ ವಸತಿ ಶಾಲೆ, ಏಕಲವ್ಯ ಮಾದರಿ ವಸತಿ ಶಾಲೆಗಳನ್ನು ಆರಂಭಿಸಿ ಬಡವರು, ಶೋಷಿತ ಸಮುದಾಯದವರ ಮಕ್ಕಳ ಶಿಕ್ಷಣಕ್ಕೆ ಒತ್ತು ನೀಡಿದವರು ಯಡಿಯೂರಪ್ಪ ಎಂದು ಬಣ್ಣಿಸಿದರು.



ಬಿಎಸ್‌ವೈ ಅಭಿಮಾನೋತ್ಸವದ ಹಿನ್ನಲೆ ಮಂಗಳವಾರ ಇಲ್ಲಿನ ವಾಲ್ಮೀಕಿ ಭವನದಲ್ಲಿ ಆಯೋಜಿಸಲಾದ ಮಾದಿಗ ಸಮುದಾಯದ ಸಭೆಯನ್ನು ಕೇಂದ್ರದ ಮಾಜಿ ಸಚಿವ ಎ.ನಾರಾಯಣಸ್ವಾಮಿ ಉದ್ಘಾಟಿಸಿದರು.

ದಲಿತಸಮುದಾಯದ ಗೋವಿಂದಕಾರಜೋಳ ಅವರನ್ನು ಉಪಮುಖ್ಯಮಂತ್ರಿ ಮಾಡಿದ್ದು ಬಿಜೆಪಿ, ಚಿತ್ರದುರ್ಗಕ್ಕೆ ನಾನು ಅಭ್ಯರ್ಥಿಯಾಗಿ ಬರುವಲ್ಲಿ ಬಿಎಸ್‌ವೈ ಕಾರಣ. ರಾಜ್ಯ ಸರ್ಕಾರ ಮೀಸಲಾತಿ ನೀಡಬೇಕೆಂದು ಕೋರ್ಟ್ ಹೇಳಿದರೂ ಕಾಂಗ್ರೆಸ್ ಮೀನಾಮೇಷ ಎಣಿಸಿತು. ಒಳಮೀಸಲಾತಿ ವಿಷಯ ದಲ್ಲಿ ದಲಿತರನ್ನು ದಾರಿ ತಪ್ಪಿಸಲಾಗಿದೆ ಎಂದರು.

ಸಂಸದ ಗೋವಿಂದ ಕಾರಜೋಳ ಮಾತನಾಡಿ, ಒಳಮೀಸಲಾತಿ ಯಾರಪಾಲನ್ನು ಕಸಿಯುವುದಲ್ಲ, ಯಾರೊಡನೆ ಸಂಘರ್ಷ ಮಾಡುವುದಲ್ಲ. ಅಸ್ಪೃಶ್ಯರನ್ನು ಮುಖ್ಯವಾಹಿನಿಗೆ ತರಲು ಪ್ರಯತ್ನವಾಗಿದೆ. ಕಡಿಮೆ ಜನರಿದ್ದ ಎಸ್ಸಿ, ಎಸ್ಟಿ ಪಟ್ಟಿಗೆ ಬೇರೆ ಜನಾಂಗದವರನ್ನು ಸೇರಿಸಿದಾಗ ವಿರೋಧ ಮಾಡಲಿಲ್ಲ. ಹಾಗಾಗಿ ಯಾರೂ ಒಳಮೀಸಲಾತಿ ವಿರೋಧಿಸಬೇಡಿ. ಇದು ಬಸವಣ್ಣನವರ ಕಾಲದ ಕನಸು. ಸಮ ಸಮಾಜದ ಕನಸು ಕಂಡವರು ಬಸವಣ್ಣ ಎಂದರು.

ಆಂಧ್ರಪ್ರದೇಶದಲ್ಲಿ ಮಂದಕೃಷ್ಣ ಮಾದಿಗ ನಡೆಸಿದ ಸಭೆಯಲ್ಲಿ ಮಾತನಾಡಿದ ಪ್ರಧಾನಿ, ನಿಮ್ಮ ಒಳಮೀಸಲಾತಿ ಹೋರಾಟಕ್ಕೆ ಕೈಜೋಡಿಸುತ್ತೇನೆ ಎಂದು ಹೇಳಿದ್ದರು. 20 ವರ್ಷ ಕೋರ್ಟ್‌ನಲ್ಲಿದ್ದ ಮೀಸಲಾತಿಗೆ ಪ್ರಧಾನಿ ನರೇಂದ್ರ ಮೋದಿ ಚಾಲನೆ ನೀಡಿದರು. ಒಳಮೀಸಲಾತಿ ಕುರಿತು ಮೋದಿ ಹೋರಾಡದಿದ್ದಲ್ಲಿ ರಾಜ್ಯ ಸರ್ಕಾರದ ಜವಾಬ್ದಾರಿ ನಮಗೆ ತಿಳಿಯುತ್ತಿರಲಿಲ್ಲ. ಆದಗ್ಯೂ ಕಾಂಗ್ರೆಸ್‌ನಿಂದ ಒಳಮೀಸಲಾತಿ ವಂಚನೆಯಾಗಿದೆ. ಇದರಿಂದ ಯಾವುದೇ ಉತ್ತಮ ಹುದ್ದೆಗಳು ನಮ್ಮ ಸಮಾಜಕ್ಕೆ ದೊರೆಯುವುದಿಲ್ಲ. ಇದನ್ನು ಮಾದಿಗ ಸಮಾಜ ಅರ್ಥ ಮಾಡಿಕೊಳ್ಳಬೇಕು ಎಂದು ಹೇಳಿದರು.

ಒಳ ಮೀಸಲಾತಿಗೆ ಸದಾಶಿವ ಆಯೋಗ ರಚಿಸಿದ ಕಾಂಗ್ರೆಸ್ ಸರ್ಕಾರ ಅದಕ್ಕೆ ಕನಿಷ್ಟ ಕುರ್ಚಿ, ಟೇಬಲ್, ಅಗತ್ಯ ಸಿಬ್ಬಂದಿ ನೀಡಲಿಲ್ಲ. ಯಡಿಯೂರಪ್ಪನವರು ಮುಖ್ಯಮಂತ್ರಿಯಾದ ಮೇಲೆ ಅಗತ್ಯ ಅನುದಾನ ನೀಡಿದರು. ಬಿಜೆಪಿ ಕಾಲದಲ್ಲಿ ಮಾಧುಸ್ವಾಮಿ ಒಳಮೀಸಲಾತಿ ವರದಿ ನೀಡಿದರು. ಮತ್ತೆ ಕಾಂಗ್ರೆಸ್ ನಾಗಮೋಹನದಾಸ್ ಆಯೋಗ ನೇಮಿಸಿತು. ಈ ಮೂರು ವರದಿಗಳನ್ನು ತಿರಸ್ಕರಿಸಿತು. ಈಗ ಅವೈಜ್ಞಾನಿಕ ರೀತಿಯಲ್ಲಿ ಒಳಮೀಸಲಾತಿ ನೀಡಿ ಮಾದಿಗರಿಗೆ ದ್ರೋಹ ಮಾಡಿದೆ ಎಂದು ಕಿಡಿಕಾರಿದರು.

ದಲಿತ ಮುಖಂಡ ಹನುಮಂತಪ್ಪ ಬಳ್ಳಾರಿ, ಹಾವೇರಿ ಗವಿಸಿದ್ದಪ್ಪ, ಮಾದಿಗ ದಂಡೋರ ನರಸಪ್ಪ, ಮುನಿರಾಜ್, ಫರ್ನಾಂಡೀಸ್, ಆಲೂರು ಲಿಂಗರಾಜ್, ಉಚ್ಚನ್ಯಾಯಾಲಯದ ವಕೀಲ ವೆಂಕಟೇಶ್ ದೊಡ್ಡೇರಿ, ಕೊಪ್ಪಳದ ಮಹಾಲಕ್ಷ್ಮಿ, ಮೊಳಕಾಲ್ಮುರು ಮಂಡಲ ಅಧ್ಯಕ್ಷ ಮಲ್ಲೇಶ್ ಮಾತನಾಡಿದರು. ಮಾಜಿಶಾಸಕ ಜಿ.ಎಚ್.ತಿಪ್ಪಾರೆಡ್ಡಿ, ಬಿಜೆಪಿ ಜಿಲ್ಲಾಧ್ಯಕ್ಷ ಕೆ.ಟಿ.ಕುಮಾರಸ್ವಾಮಿ, ವಿಭಾಗ ಸಹ ಪ್ರಭಾರಿ ಎ.ಮುರುಳಿ, ಮುರಾರ್ಜಿ ಸೇರಿದಂತೆ ಹಲವರು ಸಭೆಯಲ್ಲಿ ಭಾಗವಹಿಸಿದ್ದರು.

# ಜಿಲ್ಲೆಯ 216 ಹಳ್ಳಿಗಳಲ್ಲಿ ಕುಡಿವ ನೀರಿನ ಅಭಾವ

## ಸಮಸ್ಯಾತ್ಮಕ ಹಳ್ಳಿಗಳಿಗೆ 24 ಗಂಟೆಯೊಳಗೆ ನೀರು ಪೂರೈಕೆಗೆ ಸಂಸದ ಕಾರಜೋಳ ತಾಕೀತು

• **ಕನ್ನಡಪ್ರಭ ವಾರ್ತೆ** ಚಿತ್ರದುರ್ಗ

ಜಿಲ್ಲೆಯ 216 ವಸತಿ ಪ್ರದೇಶಗಳಲ್ಲಿ ಕುಡಿವ ನೀರಿನ ಅಭಾವ ತಲೆದೋರಿದ್ದು ಸಮಸ್ಯಾತ್ಮಕ ಹಳ್ಳಿಗಳಲ್ಲಿ 24 ಗಂಟೆಯೊಳಗಾಗಿ ನೀರು ಪೂರೈಕೆ ಮಾಡಬೇಕು. ತಕ್ಷಣವೇ ಆರ್‌ಓ ಘಟಕಗಳ ದುರಸ್ಥಿಗೆ ಕ್ರಮ ಕೈಗೊಳ್ಳುವಂತೆ ಸಂಸದ ಗೋವಿಂದ ಕಾರಜೋಳ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಂಗಳವಾರ ಜಿಲ್ಲೆಯ ಕುಡಿಯುವ ನೀರಿನ ಸಮಸ್ಯೆ ಕುರಿತು ಸಭೆ ನಡೆಸಿ ಮಾತನಾಡಿದ ಅವರು, ಸಾರ್ವಜನಿಕರು ಕುಡಿಯುವ ನೀರಿನ ಸಮಸ್ಯೆ ಕುರಿತು ದೂರವಾಣಿಯ ಮೂಲಕ ಅಳಲು ತೋಡಿಕೊಳ್ಳುತ್ತಿದ್ದಾರೆ. ಅಧಿಕಾರಿಗಳು ಹಳ್ಳಿಗಳಿಗೆ ಭೇಟಿ ನೀಡಿ, ಪರಿಸ್ಥಿತಿ ಅವಲೋಕಿಸಿ ತಕ್ಷಣವೇ ಸ್ಪಂದಿಸಬೇಕು. ತೀವ್ರ ನೀರಿನ ಅಭಾವವಿರುವ ಗ್ರಾಮ ಗಳಲ್ಲಿ ಸುತ್ತಲಿನ ರೈತರ ಖಾಸಗಿ ಬೋರ್‌ವೆಲ್‌ಗಳನ್ನು ಬಾಡಿಗೆಗೆ ಪಡೆದು ನೀರು ಪೂರೈಸಬೇಕು. ಬೋರ್‌ವೆಲ್ ಸೌಲಭ್ಯ ವಿಲ್ಲದ ಕಡೆಗಳಲ್ಲಿ ಟ್ಯಾಂಕರ್ ಮೂಲಕ ನೀರು ತಲುಪಿಸುವ ವ್ಯವಸ್ಥೆ ಮಾಡಬೇಕು ಎಂದು ನಿರ್ದೇಶನ ನೀಡಿದರು.

ಬೇಸಿಗೆ ಅವಧಿಯಲ್ಲಿ ಮನುಷ್ಯರಷ್ಟೇ ಅಲ್ಲದೆ ಜಾನುವಾರು ಮತ್ತು ಪಕ್ಷಿಗಳಿಗೂ ನೀರಿನ ಅಗತ್ಯವಿರುವುದರಿಂದ, ಸಾರ್ವಜನಿಕರು ನೀರನ್ನು ವ್ಯರ್ಥ ಮಾಡದೆ ಮಿತ ವಾಗಿ ಬಳಸಬೇಕು. ಉಪ್ಪು ನೀರು ಲಭ್ಯವಿರುವ ಕಡೆಗಳಲ್ಲಿ ಅದನ್ನು ಮನೆ ಬಳಕೆಗೆ ಮತ್ತು ಸಿಹಿ ನೀರನ್ನು ಕುಡಿಯಲು ಮಾತ್ರ ಉಪಯೋಗಿಸಬೇಕು ಎಂದು ಸಂಸದರು ಸಾರ್ವಜನಿಕರಲ್ಲಿ ವಿನಂತಿಸಿದರು.



ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಮಂಗಳವಾರ ನಡೆದ ಕುಡಿವ ನೀರು ಸಮಸ್ಯೆ ಕುರಿತ ಪರಿಶೀಲನಾ ಸಭೆಯಲ್ಲಿ ಸಂಸದ ಗೋವಿಂದ ಕಾರಜೋಳ ಮಾತನಾಡಿದರು.

ತುಂಗಭದ್ರಾ ಜಲಾಶಯದಲ್ಲಿ ನೀರಿನ ಮಟ್ಟ ಕಡಿಮೆಯಾಗಿರುವುದಿಂದ, ಮೊಳಕಾಲ್ಮೂರು, ಚಳ್ಳಕೆರೆ, ಪಾವಗಡ ಬಹುಗ್ರಾಮ ಕುಡಿಯುವ ನೀರಿನ ಯೋಜನೆಗೆ ನೀರು ಒದಗಿಸುವುದನ್ನು ಟಿಬಿ ಡ್ಯಾಂ ಮಂಡಳಿ ನಿಲ್ಲಿಸಿದೆ. ಇದರಿಂದ ಮುಂಬರುವ ಕೆಲವಾರಗಳಲ್ಲಿ ಮೊಳಕಾಲ್ಮೂರು ಹಾಗೂ ಚಳ್ಳಕೆರೆ ತಾಲೂಕುಗಳಲ್ಲಿಯೂ ಕುಡಿಯುವ ನೀರಿನ ಸಮಸ್ಯೆ ತಲೆದೋರುವ ಪರಿಸ್ಥಿತಿ ಎದುರಾಗಿದೆ. ಮಳೆಯ ಕೊರತೆ ಇರುವುದಿಂದ ಕುಡಿಯುವ ನೀರಿಗೆ ಆದ್ಯತೆ ನೀಡಿ, ಜಲಾಶಯದ ನೀರು ಬಳಸಲು ಅನುಮತಿ ನೀಡುವಂತೆ ಕೇಂದ್ರ ಜಲಶಕ್ತಿ ಮಂತ್ರಾಲಯ ಹಾಗೂ ಟಿಬಿ ಡ್ಯಾಂ ಮಂಡಳಿಗೆ ಪತ್ರ ಬರೆಯುವುದಾಗಿ ಸಂಸದ ಗೋವಿಂದ ಕಾರಜೋಳ ತಿಳಿಸಿದರು.

ವಿವಿ ಸಾಗರದಿಂದ ಹಿರಿಯೂರಿನ ಸುವರ್ಣಮುಖಿ ನದಿ ಬ್ಯಾರೇಜ್‌ಗೆ ಕುಡಿಯುವ ನೀರಿನ ಬಳಕೆಗೆ 0.1 ಟಿಎಂಸಿ ನೀರು ಹರಿಸಲು ಬೆಂಗಳೂರು ವಿಭಾಗದ ಪ್ರಾದೇಶಿಕ ಆಯುಕ್ತರಿಂದ ಅನುಮತಿ ಪಡೆಯುವಂತೆ ಸಂಸದರು ಇದೇ ಸಂದರ್ಭದಲ್ಲಿ ಸೂಚಿಸಿದರು.

ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ಡಾ.ಎಸ್.ಆಕಾಶ್ ಮಾತನಾಡಿ, ಜಿಲ್ಲೆಯ ಸುಮಾರು 93 ಗ್ರಾಮ ಪಂಚಾಯಿತಿಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಕಾಣಿಸಿಕೊಂಡಿದ್ದು, ಒಟ್ಟು 216 ಜನವಸತಿ ಪ್ರದೇಶಗಳಲ್ಲಿ ನೀರಿನ ಅಭಾವವಿದೆ. ಪ್ರಸಕ್ತ ವರ್ಷದಲ್ಲಿ ಹೊಸದಾಗಿ 54 ಕೊಳವೆ ಬಾವಿಗಳನ್ನು ಕೊರೆಸಲಾಗಿದೆ. ಇದರಲ್ಲಿ 7 ಕೊಳವೆ ಬಾವಿಗಳಲ್ಲಿ ಕಡಿಮೆ ನೀರು ಲಭ್ಯವಾಗಿದೆ. ಹೊಳಲ್ಕೆರೆ ತಾಲೂಕಿನ ಆರ್.ನುಲೇನೂರು ಗ್ರಾಪಂ ರಂಗಾಪುರ ಲಂಬಾಣಿಹಟ್ಟಿ, ಚಿಕ್ಕಜಾಜೂರಿನ ಮಾರುತಿನಗರ, ಹಿರಿಯೂರು ತಾಲೂಕಿನ ಕುಂಟಪ್ಪನಹಟ್ಟಿ ಜನವಸತಿ ಪ್ರದೇಶಗಳಿಗೆ ಟ್ಯಾಂಕರ್ ಮೂಲಕ ನೀರು ಒದಗಿಸಲಾಗುತ್ತಿದೆ. ಜಿಲ್ಲೆಯಲ್ಲಿ 1045 ಆರ್‌ಓ ಘಟಕಗಳು ಇದ್ದು, 832 ಕಾರ್ಯಾಚರಣೆಯಲ್ಲಿವೆ. 133 ಘಟಕಗಳು ಸ್ಥಗಿತಗೊಂಡಿವೆ. ಆರ್‌ಓ ಘಟಕಗಳ ದುರಸ್ತಿಗೆ 63 ಲಕ್ಷ ರು. ಅನುದಾನದ ಅವಶ್ಯಕತೆ ಇದೆ ಎಂದು ತಿಳಿಸಿದರು.

ಎಡಿಸಿ ಬಿ.ಟಿ.ಕುಮಾರಸ್ವಾಮಿ, ಭದ್ರಾ ಮೇಲ್ದಂಡೆ ಯೋಜನೆಯ ಮುಖ್ಯ ಎಂಜಿನಿಯರ್ ಲಮಾಣಿ, ಜಿಪಂ ಉಪ ಕಾರ್ಯದರ್ಶಿ ಡಾ.ರಂಗಸ್ವಾಮಿ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕಿ ರೇಷ್ಮಾ ಹಾನಗಲ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಕಾರ್ಯಪಾಲಕ ಎಂಜಿನಿಯರ್ ಅಮರನಾಥ್ ಜೈನ್, ಪೌರಾಯುಕ್ತೆ ಲಕ್ಷ್ಮೀ ಸೇರಿ ಇಒಗಳು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಸಹಾಯಕ ಇಂಜಿನಿಯರ್‌ಗಳು ಉಪಸ್ಥಿತರಿದ್ದರು.

# ಕಾಲೇಜುಗಳ ಉಪನ್ಯಾಸಕರ ಸಂಘದ ಪದಾಧಿಕಾರಿಗಳ ಆಯ್ಕೆಗೆ ಸದವಕಾಶ



ಚಿತ್ರದುರ್ಗ ಪ್ರವಾಸಿ ಮಂದಿರದಲ್ಲಿ ನಡೆದ ಜಿಲ್ಲಾ ಕಾರ್ಯಕಾರಣಿ ಸಭೆಯಯಲ್ಲಿ ಜಿಲ್ಲಾ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರ ಸಂಘದ ಅಧ್ಯಕ್ಷ ಮಲ್ಲೇಶ್ ಮಾತನಾಡಿದರು.

• **ಕನ್ನಡಪ್ರಭ ವಾರ್ತೆ** ಚಿತ್ರದುರ್ಗ

ಕರ್ನಾಟಕ ರಾಜ್ಯ ಪದವಿಪೂರ್ವ ಕಾಲೇಜುಗಳ ಉಪನ್ಯಾಸಕರ ಸಂಘದ ರಾಜ್ಯ ಮತ್ತು ಜಿಲ್ಲಾ ಮಟ್ಟದ ಅಧ್ಯಕ್ಷ ಮತ್ತು ಇತರೆ ಪದಾಧಿಕಾರಿಗಳನ್ನು ಮೊಟ್ಟಮೊದಲ ಬಾರಿಗೆ ನೇರವಾಗಿ ಚುನಾವಣೆಯ ಮೂಲಕ ಆಯ್ಕೆಮಾಡುವ ಸದಾವಕಾಶ ಈ ರಾಜ್ಯದ ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನ್ಯಾಸಕರು ಹೊಂದಿದ್ದಾರೆ ಎಂದು ಚಿತ್ರದುರ್ಗ ಜಿಲ್ಲಾ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರ ಸಂಘದ ಅಧ್ಯಕ್ಷ ಬಿ.ಆರ್.ಮಲ್ಲೇಶ್ ತಿಳಿಸಿದರು.

ನಗರದ ಪ್ರವಾಸಿ ಮಂದಿರದಲ್ಲಿ ನಡೆದ ಜಿಲ್ಲಾ ಕಾರ್ಯಕಾರಣಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, 2011ರ ಹಳೆಯ ಬೈಲಾದ ಪ್ರಕಾರ ತಾಲೂಕು ಮಟ್ಟದ ಪದಾಧಿಕಾರಿಗಳನ್ನು ಮಾತ್ರ ಆಯಾ ತಾಲೂಕಿನಲ್ಲಿ ಕೆಲಸ ನಿರ್ವಹಿಸುತ್ತಿರುವ ಉಪನ್ಯಾಸಕರು ಆಯ್ಕೆ ಮಾಡುತ್ತಿದ್ದರು. ಆಯ್ಕೆಯಾದ ತಾಲೂಕು ಪ್ರತಿನಿಧಿಗಳು ಜಿಲ್ಲಾ ಮಟ್ಟದ ಪದಾಧಿಕಾರಿಗಳನ್ನು, ಜಿಲ್ಲಾ ಪದಾಧಿಕಾರಿಗಳು ರಾಜ್ಯ ಘಟಕದ ಪದಾಧಿಕಾರಿಗಳನ್ನು ಆಯ್ಕೆ ಮಾಡುವ ಮೂಲಕ ರಾಜ್ಯದ ಬಹುಸಂಖ್ಯೆಯ ಉಪನ್ಯಾಸಕರ ಅಭಿಪ್ರಾಯವನ್ನು ಕಡೆಗಾಣಿಸಲಾಗುತಿತ್ತು. ಆದರೆ 2024ರ ಹೊಸ ಬೈಲಾದ ಪ್ರಕಾರ ರಾಜ್ಯದ ನೊಂದಾಯಿತ ಎಲ್ಲಾ ಉಪನ್ಯಾಸಕರು ರಾಜ್ಯ ಘಟಕ ಮತ್ತು ಜಿಲ್ಲಾ ಘಟಕದ ಒಂಬತ್ತು ಜನ ಪದಾಧಿಕಾರಿಗಳಾದ ಅಧ್ಯಕ್ಷ, ಪ್ರಧಾನ ಕಾರ್ಯದರ್ಶಿ, ಕಾರ್ಯಾಧ್ಯಕ್ಷರು, ಖಜಾಂಚಿ, ಉಪಾಧ್ಯಕ್ಷರು, ಪ್ರಧಾನ ಕಾರ್ಯ ಸಂಘಟನಾ ಕಾರ್ಯದರ್ಶಿ, ಕಾರ್ಯದರ್ಶಿ, ಜಂಟಿ ಕಾರ್ಯದರ್ಶಿ ಹಾಗೂ ಸಂಚಾಲಕರನ್ನು ಆಯ್ಕೆಮಾಡುವ ಅವಕಾಶ ಕಲ್ಪಿಸಿದೆ.

ಒಂಬತ್ತು ಜನ ಕಾರ್ಯಕಾರಿ ಸದಸ್ಯರಲ್ಲಿ ಒಂದು ಸ್ಥಾನವನ್ನು ಕಡ್ಡಾಯವಾಗಿ ಮಹಿಳೆಯರಿಗೆ ಮೀಸಲಾಗಿಡಬೇಕಿದೆ. ಈ ಚುನಾವಣೆಯಲ್ಲಿ ಸ್ಪರ್ಧಿಸಲು ಅಥವಾ ತಮ್ಮ ನೆಚ್ಚಿನ ಪ್ರತಿನಿಧಿಗೆ ಮತದಾನ ಮಾಡಲು ಸಂಘದ ಸದಸ್ಯತ್ವವನ್ನು ಹೊಂದಿರಬೇಕು. ಆದ್ದರಿಂದ ಈ ಜಿಲ್ಲೆಯ ಸರ್ಕಾರಿ ಮತ್ತು ಅನುದಾನಿತ ಪದವಿಪೂರ್ವ ಕಾಲೇಜುಗಳ ಉಪನ್ಯಾಸಕರು ಹೆಚ್ಚಿನ ಸಂಖ್ಯೆಯಲ್ಲಿ ಸದಸ್ಯತ್ವ ಪಡೆದು ಪದವಿ ಪೂರ್ವ ಶಿಕ್ಷಣ ಇಲಾಖೆಯ ಅಸ್ಮಿತೆಯನ್ನು ಉಳಿಸಿಕೊಳ್ಳುವ ಹಾಗೂ ಉಪನ್ಯಾಸಕರ ಹಿತ ಕಾಪಾಡುವ ಉತ್ತಮ ಪ್ರತಿನಿಧಿಗಳನ್ನು ಆಯ್ಕೆಮಾಡುವ ಮೂಲಕ ಸಂಘವನ್ನು ಮತ್ತಷ್ಟು ಗಟ್ಟಿಗೊಳಿಸಲು ಮುಂದಾಗಬೇಕಿದೆ ಎಂದರು.

ಮೇ 8ರಂದು ಕರಡು ಮತದಾರರ ಪಟ್ಟಿ ಪ್ರಕಟಿಸಲಾಗುವುದು. ಮೇ 8ರಿಂದ ಮೇ 15ರವರೆಗೆ ಕರಡು ಮತದಾರರ ಪಟ್ಟಿಗೆ ಆಕ್ಷೇಪಣೆ ಸಲ್ಲಿಕೆಗೆ ಅವಕಾಶ ನೀಡಿ ನಂತರದಲ್ಲಿ ಅಂತಿಮ ಮತದಾರರ ಪಟ್ಟಿ ಪ್ರಕಟಿಸಿ ಜೂನ್ ಮೊದಲ ವಾರದಲ್ಲಿ ಚುನಾವಣೆ ನಡೆಸಲಾಗುವುದು ಎಂದರು. ಜಿಲ್ಲಾ ಸಂಘದ ಕೋಶಾಧ್ಯಕ್ಷರಾದ ಎನ್.ಕೆಂಚವೀರಪ್ಪ ಮಾತಾನಾಡಿ, ಆನ್ ಲೈನ್ ಮೂಲಕ ನೊಂದಾಣಿಗಾಗಿ ಲಿಂಕ್ https://kspucla.co.in ಬಳಸುವಂತೆ ತಿಳಿಸಿದರು. ಸಭೆಯಲ್ಲಿ ಹೊಳಲ್ಕೆರೆ ತಾಲೂಕಿನ ಅಧ್ಯಕ್ಷ ಆರ್.ಚಂದ್ರಶೇಖರ್, ಚಳ್ಳಕೆರೆ ಕಾರ್ಯಾಧ್ಯಕ್ಷ ಅಶ್ವತ್ಥ ರೆಡ್ಡಿ, ಜಿಲ್ಲಾ ಸಂಘದ ಗೌರವಾಧ್ಯಕ್ಷ ಡಾ.ಜೆ ಮೋಹನ ಮತ್ತಿತರರು ಉಪಸ್ಥಿತರಿದ್ದರು.

# ಯಡಿಯೂರಪ್ಪರ ದೀರ್ಘಕಾಲದ ಅನುಯಾಯಿ ನಾನು

## ಭರಮಸಾಗರದಲ್ಲಿ ನಡೆದ ಬಿಎಸ್‌ವೈ ಅಭಿಮಾನೋತ್ಸವ ಪೂರ್ವಭಾವಿ ಸಭೆಯಲ್ಲಿ ಚಂದ್ರಪ್ಪ

• **ಕನ್ನಡಪ್ರಭ ವಾರ್ತೆ** ಸಿರಿಗೆರೆ

ರಾಜಕೀಯ ನೇತಾರ, ರಾಜ್ಯದ ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪನವರ ಜೊತೆಗೆ ನನಗೆ ನಿಕಟ ಬಾಂಧವ್ಯ ಇದೆ. ಅವರ ದೀರ್ಘಕಾಲದ ಅನುಯಾಯಿ ನಾನು. ಅವರು ಅನಿವಾರ್ಯವಾಗಿ ಬಿಜೆಪಿ ತೊರೆದು ಕೆಜೆಪಿ ಪಕ್ಷ ಕಟ್ಟುವ ಆರು ತಿಂಗಳ ಮೊದಲೇ ಶಾಸಕ ಸ್ಥಾನಕ್ಕೆ ರಾಜಿನಾಮೆ ಕೊಟ್ಟು ಅವರನ್ನು ಹಿಂಬಾಲಿಸಿದ್ದೆ ಎಂದು ಶಾಸಕ ಡಾ.ಎಂ.ಚಂದ್ರಪ್ಪ ಹೇಳಿದರು.

ಚಿತ್ರದುರ್ಗದಲ್ಲಿ ಮೇ 9ರಂದು ನಡೆಯಲಿರುವ ಬಿಎಸ್‌ವೈ ಅಭಿಮಾನೋತ್ಸವ ಕಾರ್ಯಕ್ರಮದ ಪ್ರಯುಕ್ತ ಭರಮಸಾಗರ ಬಿಜೆಪಿ ಮಂಡಲ ವತಿಯಿಂದ ನಡೆದ ಪೂರ್ವಭಾವಿ ಸಭೆಯನ್ನು ಉದ್ಘಾಟಿಸಿ ಮಾತನಾಡಿದರು.

ಯಡಿಯೂರಪ್ಪನವರು ರಾಜ್ಯದ ಮುಖ್ಯಮಂತ್ರಿಯಾಗಿದ್ದಾಗ ನಾನು ಕೇಳಿದಷ್ಟು ಅನುದಾನ ಮಂಜೂರು ಮಾಡಿದ ಪರಿಣಾಮ ಎಲ್ಲಾ ಕೆರೆಗಳಲ್ಲಿ ನೀರು ತುಂಬಿದೆ. ಪರಿಣಾಮವಾಗಿ ಭರಮಸಾಗರದ ಸುತ್ತ ಸಮೃದ್ಧಿಯ ಅಡಕೆ ತೋಟಗಳು ತಲೆ ಎತ್ತಿ ನಿಂತಿವೆ. ಬರ ಆವರಿಸಿ 20 ವರ್ಷಗಳ ಕಾಲ ಸಾಕಿದ ಅಡಕೆ ತೋಟಗಳು ಒಣಗಿದರೆ ರೈತರಿಗೆ ತೊಂದರೆ ಯಾಗುವ ಸಂಕಟ ಇರುವುದರಿಂದ ಇಂತಹ ಯೋಜನೆಗಳನ್ನು ತರಲಾಗಿದೆ. ಜನರಿಗೆ ಉಪಕಾರ ಮಾಡಿದವರನ್ನು ಸ್ಮರಿಸುವ ಗುಣ ಪ್ರತಿಯೊಬ್ಬ ಮನುಷ್ಯ ನಲ್ಲಿಯೂ ಇರಬೇಕು. ಅದಕ್ಕಾಗಿ ಮೇ 9ರಂದು ನಡೆಯುವ ಅಭಿಮಾ ನೋತ್ಸವ ಕಾರ್ಯಕ್ರಮಕ್ಕೆ ಸ್ವಯಂ ಪ್ರೇರಣೆಯಿಂದ ಭಾಗವಹಿಸಿ ಎಂದು ಕ್ಷೇತ್ರದ ಜನತೆಯಲ್ಲಿ ಶಾಸಕ ಡಾ.ಎಂ.ಚಂದ್ರಪ್ಪ ಮನವಿ ಮಾಡಿದರು. 50 ವರ್ಷಗಳಲ್ಲಿ 45 ವರ್ಷಗಳ ಕಾಲ ಹೋರಾಟಕ್ಕಾಗಿಯೇ ಜೀವನ ಮುಡುಪಾಗಿಟ್ಟಿದ್ದ ಬಿ.ಎಸ್.ಯಡಿಯೂರಪ್ಪನವರು ಐದು ವರ್ಷಗಳ ಕಾಲ ಮಾತ್ರ ಮುಖ್ಯಮಂತ್ರಿಯಾಗಿದ್ದರು. ಅವರು ಯಾವುದೇ ಒಂದು ಕೋಮಿಗೆ ಸೀಮಿತವಾಗದೇ ಎಲ್ಲರಿಗೂ ಅನುಕೂಲಗಳನ್ನು ಕಲ್ಪಿಸಿದರು. ಸಾಮಾಜಿಕ ನ್ಯಾಯವನ್ನು ಎಲ್ಲ ಜಾತಿ ಮತ್ತು ಧರ್ಮದವರಿಗೂ ಕಲ್ಪಿಸಿದರು. ಹಾಗಾಗಿ ಅವರಿಗೆ ಬೆಂಬಲ ತೋರಿಸಿ ಋಣ ತೀರಿಸಬೇಕಾಗಿದೆ. ಆತ್ಮ ಸಂತೋಷದಿಂದ ಅಭಿಮಾನೋತ್ಸವದಲ್ಲಿ ಭಾಗವಹಿಸಿ ಎಂದು ಜನತೆಯಲ್ಲಿ ವಿನಂತಿಸಿದರು. ಈ ವೇಳೆ ಭರಮಸಾಗರ ಬಿಜೆಪಿ ಮಂಡಲ ಅಧ್ಯಕ್ಷ ಎನ್.ಟಿ.ಬಸವರಾಜ್, ಉಪಾಧ್ಯಕ್ಷ ಶೈಲೇಶ್ ಕುಮಾರ್, ಮಂಜುನಾಥ, ಪ್ರವೀಣ್ ಕುಮಾರ್, ಚಿಕ್ಕಬೆನ್ನೂರು ಗೌಡ್ರ ತೀರ್ಥಪ್ಪ, ಕಲ್ಲೇಶ್, ಸಿದ್ದಬಸಣ್ಣ, ಕೆ.ಎನ್.ಮೋಹನ್, ರಾಜಣ್ಣ, ಪೆಟ್ರೋಲ್ ಬಸವರಾಜ್ ಹಾಗೂ ಭರಮಸಾಗರ ಮಂಡಲದ ಚುನಾಯಿತ ಪ್ರತಿನಿಧಿಗಳು ಹಾಗೂ ಪದಾಧಿಕಾರಿಗಳು ಪೂರ್ವಭಾವಿ ಸಭೆಯಲ್ಲಿ ಹಾಜರಿದ್ದರು.



ಭರಮಸಾಗರದ ಪ್ರವಾಸಿ ಮಂದಿರದಲ್ಲಿ ಕರೆಯಲಾಗಿದ್ದ ಪೂರ್ವಭಾವಿ ಸಭೆಯನ್ನು ಶಾಸಕ ಡಾ.ಎಂ.ಚಂದ್ರಪ್ಪ ಉದ್ಘಾಟಿಸಿದರು.

### 8ಕ್ಕೆ ಎಆರ್‌ಜಿ ವೈಭವ

**ದಾವಣಗೆರೆ:** ಎಆರ್‌ಜಿ ಕಲಾ ಮತ್ತು ವಾಣಿಜ್ಯ ಕಾಲೇಜು, ಸ್ನಾತಕೋತ್ತರ ಕೇಂದ್ರದ 2025-26ನೇ ಸಾಲಿನ ಸಾಂಸ್ಕೃತಿಕ ವೇದಿಕೆ, ಎನ್ನೆಸ್ಸೆಸ್, ಎನ್‌ಸಿಸಿ, ಯುವ ರೆಡ್ ಕ್ರಾಸ್, ರೇಂಜರ್ ಅಂಡ್ ರೋವರ್, ಕ್ರೀಡಾ ವಿಭಾಗ, ವಿದ್ಯಾರ್ಥಿ ಸಂಘ, ಹಿರಿಯ ವಿದ್ಯಾರ್ಥಿಗಳ ಸಂಘದ ಸಹಯೋಗದಲ್ಲಿ ಎಆರ್‌ಜಿ ವೈಭವ-2026 ಅನ್ನು ಮೇ 8 ರಂದು ಕಾಲೇಜಿನ ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ.



**ಮಲೇರಿಯಾ ದಿನ** | ಆರೋಗ್ಯಾಧಿಕಾರಿ ಡಾ.ರಾಘವೇಂದ್ರ ಪ್ರಸಾದ್ ಹೇಳಿಕೆ

# ಮಲೇರಿಯಾ ನಿರ್ಮೂಲನೆಗೆ ಸಾರ್ವಜನಿಕರ ಸಹಕಾರ ಅಗತ್ಯ



ತಾಲ್ಲೂಕಿನ ಬೆಲಗೂರು ಸಮುದಾಯ ಆರೋಗ್ಯ ಕೇಂದ್ರದಲ್ಲಿ ಹಮ್ಮಿಕೊಳ್ಳಲಾಗಿದ್ದ ವಿಶ್ವ ಮಲೇರಿಯಾ ದಿನ ಕಾರ್ಯಕ್ರಮದಲ್ಲಿ ಟಿಎಚ್ ಒ ರಾಘವೇಂದ್ರ ಪ್ರಸಾದ್ ಅಧ್ಯಕ್ಷತೆ ವಹಿಸಿ ಮಾತನಾಡಿದರು.

**ಹೊಸದುರ್ಗ:** ಮಲೇರಿಯಾ ರೋಗವನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡಲು ಆರೋಗ್ಯ ಇಲಾಖೆಯೊಂದಿಗೆ ಸಾರ್ವಜನಿಕರ ಸಹಕಾರ ಅತ್ಯಂತ ಅಗತ್ಯವಾಗಿದೆ ಎಂದು ತಾಲೂಕು ಆರೋಗ್ಯಾಧಿಕಾರಿ ಡಾ.ರಾಘವೇಂದ್ರ ಪ್ರಸಾದ್ ತಿಳಿಸಿದರು.

ತಾಲೂಕಿನ ಬೆಲಗೂರು ಸಮುದಾಯ ಆರೋಗ್ಯ ಕೇಂದ್ರದಲ್ಲಿ ಈಚೆಗೆ ಹಮ್ಮಿಕೊಳ್ಳಲಾಗಿದ್ದ ವಿಶ್ವ ಮಲೇರಿಯಾ ದಿನ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಮಲೇರಿಯಾ ರೋಗವನ್ನು ಕೊನೆಗೊಳಿಸಲು ಅಗತ್ಯ ಕ್ರಮಗಳ ಚಾಲನೆಯನ್ನು ಈಗ ನಾವು ಮಾಡೋಣ ಮತ್ತು ಮಾಡುತ್ತೇವೆ ಎಂಬ ಘೋಷವಾಕ್ಯದೊಂದಿಗೆ ರೋಗ ತಡೆಗಟ್ಟುವ ಕ್ರಮಗಳ ಬಗ್ಗೆ ಜಾಗೃತಿ ಮೂಡಿಸಿದರು. ಇಲಾಖೆಯ ಎಲ್ಲಾ ಯೋಜನೆಗಳನ್ನು ಸಮರ್ಥವಾಗಿ ಅನುಷ್ಠಾನಗೊಳಿಸಲು ಸಾರ್ವಜನಿಕರ ಸಹಕಾರ ಅತಿಮುಖ್ಯ ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ವೈದ್ಯ ಡಾ.ಸಹನ, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಲಲಿತಮ್ಮ, ಹಿರಿಯ ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿ ವಿಜಿಯಮ್ಮ, ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿಗಳು, ಸಮುದಾಯ ಆರೋಗ್ಯಾಧಿಕಾರಿಗಳು, ಆಶಾಕಾರ್ಯಕರ್ತೆಯರು ಹಾಗೂ ಗ್ರಾಮಸ್ಥರು ಹಾಜರಿದ್ದರು.

ಬಗರ್‌ಹುಕುಂ ಸಾಗುವಳಿದಾರರಿಗೆ ಸಾಗುವಳಿ ಚೀಟಿ ನೀಡಬೇಕು. ಕೂಡಲೇ ಸಮಿತಿ ರಚನೆ ಮಾಡಿ, ಅರ್ಹ ರೈತರಿಗೆ ಸಾಗುವಳಿ ಚೀಟಿ ಕೊಡಬೇಕು. ಫಸಲ್ ವಿಮಾ ಯೋಜನೆಯಡಿ ತಕ್ಷಣ ರೈತರ ಖಾತೆಗೆ ಹಣ ಜಮಾ ಮಾಡಬೇಕು. ದಾವಣಗೆರೆ ಜಿಲ್ಲೆಯ ಗ್ರಾಮೀಣ ಭಾಗದ ಕುಡಿಯುವ ನೀರಿನ ಸಮಸ್ಯೆ ಸಾಕಷ್ಟಿದ್ದು, ಕೂಡಲೇ ನೀರಿನ ಸಮಸ್ಯೆ ನಿವಾರಿಸಲು ಜಿಲ್ಲಾಧಿಕಾರಿ ಗಮನಹರಿಸಿ, ನೀರಿನ ಬವಣೆ ನೀಗಿಸಬೇಕು.

• **ಗುಮ್ಮನೂರು ಬಸವರಾಜ** ಜಿಲ್ಲಾಧ್ಯಕ್ಷ, ರಾಜ್ಯ ರೈತ ಸಂಘ-ಹಸಿರು ಸೇನೆ.



# ಬೀಗ ಪ್ರಕರಣ ತನಿಖೆಗೆ ಶಿವಕುಮಾರಪ್ಪ ಒತ್ತಾಯ

## ಸ್ಟ್ರಾಂಗ್ ರೂಂ ಬೀಗ ತೆಗೆಯದೇ, ಚಿಲಕ ಒಡೆದ ಗಂಭೀರ ಪ್ರಮಾದಕ್ಕೆ ಆಮ್ ಆದ್ಮಿ ಆಕ್ರೋಶ

• **ಕನ್ನಡಪ್ರಭ ವಾರ್ತೆ** ದಾವಣಗೆರೆ

ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ಮತ ಎಣಿಕೆಗೆ ಮುನ್ನ ಸ್ಟ್ರಾಂಗ್ ರೂಂ ಬಾಗಿಲು ತೆರೆಯುವಲ್ಲಿ ಆಗಿರುವ ಲೋಪದೋಷದ ಬಗ್ಗೆ ಕೇಂದ್ರ, ರಾಜ್ಯ ಚುನಾವಣಾ ಆಯೋಗಗಳು ಸಮಗ್ರ ತನಿಖೆ ನಡೆಸಬೇಕು. ತಪ್ಪಿತಸ್ಥರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಆಮ್ ಆದ್ಮಿ ಪಾರ್ಟಿ ಜಿಲ್ಲಾ ಅಧ್ಯಕ್ಷ, ಪರಾಜಿತ ಅಭ್ಯರ್ಥಿ ಕೆ.ಎಸ್. ಶಿವಕುಮಾರಪ್ಪ ಒತ್ತಾಯಿಸಿದ್ದಾರೆ.

ನಗರದಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮತ ಎಣಿಕೆ ಕೇಂದ್ರದಲ್ಲಿ ಸಕಾಲಕ್ಕೆ ವಿದ್ಯುನ್ಮಾನ ಮತಯಂತ್ರಗಳಿದ್ದ ಸ್ಟ್ರಾಂಗ್ ರೂಂಗಳ ಬಾಗಿಲುಗಳಿಗೆ ಹಾಕಿದ್ದ ಬೀಗಗಳನ್ನು ಕೀಗಳಿಂದ ತೆಗೆದಿಲ್ಲ. ಬದಲಿಗೆ ಸುತ್ತಿಗೆಯಿಂದ ಚಿಲಕಗಳನ್ನು ಒಡೆದು, ರೂಂಗಳ ಬಾಗಿಲುಗಳನ್ನು ತೆರೆದಿರುವುದು ಮಹಾಲೋಪವಾಗಿದೆ. ಈ ವಿಚಾರವನ್ನು ಆಯೋಗಗಳು ಗಂಭೀರವಾಗಿ ಪರಿಗಣಿಸಲಿ ಎಂದರು.

ಸ್ಟ್ರಾಂಗ್ ರೂಂ ಬಾಗಿಲು ತೆರೆಯಲಾಗದ ಲೋಪದ ಬಗ್ಗೆ ಸಮಗ್ರ ತನಿಖೆ ನಡೆಸಬೇಕು. ಈ ಬಗ್ಗೆ ಸೋಮವಾರ ಸಂಜೆಯೇ ಇ-ಮೇಲ್ ಮೂಲಕ ಚುನಾವಣಾ ಆಯೋಗಕ್ಕೆ ದೂರು ನೀಡಿದ್ದೇನೆ. ಆದರೂ, ಯಾವುದೇ ಪ್ರತಿಕ್ರಿಯೆ ಬಂದಿಲ್ಲ. ಸೋಮವಾರ ಬೆಳಗ್ಗೆ 7 ಗಂಟೆಗೆ ಮತ ಎಣಿಕೆ ಕೇಂದ್ರಕ್ಕೆ ನಾವು ಹೋಗಿದ್ದೆವು. 8 ಗಂಟೆಯಾದರೂ ಸ್ಟ್ರಾಂಗ್‌ರೂಂಬಾಗಿಲುತೆರೆದಿರಲಿಲ್ಲ. ಯಾವಕಾರಣಕ್ಕೆಸ್ಟ್ರಾಂಗ್‌ರೂಂ ಬಾಗಿಲುತೆರೆಯುತ್ತಿಲ್ಲವೆಂದುಚುನಾವಣಾಧಿಕಾರಿಗೆಕೇಳಿದರೆಬೀಗದ ಸಂಖ್ಯೆ ವ್ಯತ್ಯಾಸವಾಗಿದೆ. ಹಾಗಾಗಿ, ಸುತ್ತಿಗೆಯಿಂದ ಚಿಲಕ ಒಡೆದು, ಬಾಗಿಲು ತೆರೆಯುವುದಾಗಿ ಹೇಳಿದರು ಎಂದು ದೂರಿದರು.

ಮತ ಎಣಿಕೆ ವೇಳೆ ಇಂತಹ ಘಟನೆ ಆಗಿದ್ದನ್ನು ಗಮನಿಸಿದರೆ ಸಂಶಯ, ಅನುಮಾನ ಬರುತ್ತಿದೆ. ಚುನಾವಣಾ ಪ್ರಕ್ರಿಯೆಯಲ್ಲಿ ಇಷ್ಟೊಂದು ದೊಡ್ಡ ಪ್ರಮಾಣದ, ಗಂಭೀರ ಲೋಪಕ್ಕೆ ಯಾರು ಹೊಣೆ? ಸ್ಟ್ರಾಂಗ್ ರೂಂ ತೆರೆಯುವಲ್ಲಿ ಆದ ಲೋಪದ ಬಗ್ಗೆ ಚುನಾವಣಾ ಆಯೋಗ ತನಿಖೆ ನಡೆಸಿ, ಸೂಕ್ತ ಕ್ರಮ ತೆಗೆದುಕೊಳ್ಳದಿದ್ದರೆ ಕಾನೂನಾತ್ಮಕ ಹೋರಾಟ ನಡೆಸಲಿದ್ದೇವೆ. ಜನರ ಮುಂದೆ ಈ ಎಲ್ಲ ವಿಷಯ ತಿಳಿಸಲಾಗುವುದು. ಮತ ಎಣಿಕೆ ಅಂತಿಮ ಸುತ್ತಿನ ವೇಳೆಯೂ 3 ವಿದ್ಯುನ್ಮಾನ ಮತಯಂತ್ರ ಓಪನ್ ಆಗದ ಬಗ್ಗೆಯೂ ಅನುಮಾನವಿದೆ ಎಂದರು.

ಅಲ್ಲದೇ, ಸ್ಟ್ರಾಂಗ್ ರೂಂ ತೆರೆಯಲು ವಿಳಂಬವಾದಾಗಲೇ ಫಲಿತಾಂಶವನ್ನು ಪ್ರಕಟಿಸದಂತೆ ತಡೆ ಕೋರಿ ಲಿಖಿತ ಅರ್ಜಿ ಸಲ್ಲಿಸಬೇಕಾಗಿತ್ತು. ಆದರೆ, ಹಾಗೆ ಮಾಡಲಿಲ್ಲ. ಕಾನೂನು ರೀತಿ ಹೋರಾಟನಡೆಸಲಿದ್ದೇವೆ. ಸ್ಟ್ರಾಂಗ್‌ರೂಂಗಳಚಿಲಕಗಳಸುತ್ತಿಗೆಯಿಂದ ಹೊಡೆದು ಬಾಗಿಲು ತೆಗೆದಿದ್ದು ಸರಿಯಾದ ಕ್ರಮವಲ್ಲ. ಈ ಬಗ್ಗೆ ಚುನಾವಣಾಧಿಕಾರಿ ಸಂತೋಷಕುಮಾರ ಅವರನ್ನು ಪ್ರಶ್ನಿಸಿದರೆ ಹಾರಿಕೆ ಉತ್ತರ ನೀಡಿದರು. ಸ್ಟ್ರಾಂಗ್ ರೂಂ ಬೀಗದ ಕೀಲಿ ಕೈಗಳು ನಾಪತ್ತೆಯಾದ ಬಗ್ಗೆ ತನಿಖೆ ಆಗಬೇಕು ಎಂದು ಹೇಳಿದರು.

ಪಕ್ಷದ ಮುಖಂಡರಾದ ಎಸ್.ಕೆ. ಆದಿಲ್ ಖಾನ್, ಪ್ರೊ.ಧರ್ಮ ನಾಯ್ಕ, ಶಬ್ಬೀರ್‌ಅಹಮದ್, ಕೆ.ಪಿ.ವಿಕಾಸ್ ಇದ್ದರು.




ದಾವಣಗೆರೆಯಲ್ಲಿ ಮಂಗಳವಾರ ಆಮ್ ಆದ್ಮಿ ಪಕ್ಷದ ಜಿಲ್ಲಾಧ್ಯಕ್ಷ, ದಾವಣಗೆರೆ ದಕ್ಷಿಣ ಕ್ಷೇತ್ರದ ಪರಾಜಿತ ಅಭ್ಯರ್ಥಿ ಕೆ.ಎಸ್.ಶಿವಕುಮಾರಪ್ಪ ಸುದ್ದಿಗೋಷ್ಠಿಯಲ್ಲಿ ಮಾತನಾಡಿದರು. ಎಸ್.ಕೆ. ಆದಿಲ್ ಖಾನ್, ಪ್ರೊ.ಧರ್ಮ ನಾಯ್ಕ, ಶಬ್ಬೀರ್‌ಅಹಮದ್, ಕೆ.ಪಿ.ವಿಕಾಸ್ ಇದ್ದರು.

**ದಾವಣಗೆರೆ ದಕ್ಷಿಣ ಕ್ಷೇತ್ರದ ಮತಯಂತ್ರಗಳ ಸುರಕ್ಷತೆ ಬಗ್ಗೆಯೇ ಸಂಶಯ ವ್ಯಕ್ತವಾಗುತ್ತಿದೆ. ಚುನಾವಣೆ ಪ್ರಕ್ರಿಯೆಯಲ್ಲಿ ಇಷ್ಟು ದೊಡ್ಡ ಲೋಪ, ಗಂಭೀರ ಪ್ರಮಾದ ಆಗಿರುವುದಕ್ಕೆ ಕ್ಷೇತ್ರದ ಚುನಾವಣಾಧಿಕಾರಿಯೇ ನೇರ ಹೊಣೆ ಹೊರಬೇಕು. ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮವಾಗಬೇಕು. ಈ ಬಗ್ಗೆ ಕೇಂದ್ರ ಮತ್ತು ರಾಜ್ಯ ಚುನಾವಣಾ ಆಯೋಗಕ್ಕೆ ಈಗಾಗಲೇ ದೂರು ಸಲ್ಲಿಸಲಾಗಿದೆ. ಮುಂದೆ ಕಾನೂನು ಹೋರಾಟಕ್ಕೂ ಚಿಂತನೆ ನಡೆಸಿದ್ದೇವೆ.**

• **ಕೆ.ಎಸ್.ಶಿವಕುಮಾರಪ್ಪ,** ಜಿಲ್ಲಾಧ್ಯಕ್ಷ, ಎಎಪಿ,ದಕ್ಷಿಣ ಕ್ಷೇತ್ರ ಪರಾಜಿತ ಅಭ್ಯರ್ಥಿ.

# ವಚನಾನಂದ ಶ್ರೀಗೆ ನಿರೀಕ್ಷಣಾ ಜಾಮೀನು

**ಹರಿಹರ:** ಇಲ್ಲಿನ ವೀರಶೈವ ಲಿಂಗಾಯತ ಪಂಚಮಸಾಲಿ ಪೀಠದ ಪೀಠಾಧಿಪತಿ ಶ್ರೀ ವಚನಾನಂದ ಸ್ವಾಮೀಜಿ ಅವರಿಗೆ ಮಕ್ಕಳ ದುರ್ಬಳಕೆ ಹಾಗೂ ದೌರ್ಜನ್ಯದ ಆರೋಪಕ್ಕೆ ಸಂಬಂಧಿಸಿದ ಪ್ರಕರಣದಲ್ಲಿ ಜಿಲ್ಲಾ ನ್ಯಾಯಾಲಯವು ನಿರೀಕ್ಷಣಾ ಜಾಮೀನು ಮಂಜೂರು ಮಾಡಿದೆ.



ಮಠದ ಆಂತರಿಕ ವಿವಾದಗಳ ನಡುವೆಯೇ ಕೇಳಿಬಂದಿದ್ದ ಈ ಗಂಭೀರ ಆರೋಪದ ಹಿನ್ನೆಲೆಯಲ್ಲಿಶ್ರೀಗಳಪರವಾಗಿಏಪ್ರಿಲ್21ರಂದು ಜಿಲ್ಲಾನ್ಯಾಯಾಲಯದಲ್ಲಿಭಾರತೀಯ ನಾಗರಿಕ ಸುರಕ್ಷಾ ಸಂಹಿತೆ ಕಲಂ 482ರ ಅಡಿಯಲ್ಲಿ ನಿರೀಕ್ಷಣಾ ಜಾಮೀನಿಗಾಗಿ ಅರ್ಜಿ (ಕ್ರಿ.ಮಿ.ನಂ. 324/2026) ಸಲ್ಲಿಸಿ ದ್ದರು. ಅರ್ಜಿ ವಿಚಾರಣೆ ನಡೆಸಿದ ನ್ಯಾಯಾಲಯವು, ಸರ್ಕಾರಿ ಅಭಿಯೋಜಕರ ಆಕ್ಷೇಪಣೆ ಹಾಗೂ ಪ್ರತಿವಾದಗಳನ್ನು ಆಲಿಸಿದ ನಂತರ ಮೇ 2ರಂದು ಶ್ರೀಗಳಿಗೆ ಜಾಮೀನು ನೀಡಿ ಆದೇಶ ಹೊರಡಿಸಿದ್ದು, ಶ್ರೀಗಳಿಗೆ ತಾತ್ಕಾಲಿಕ ಸಮಾಧಾನ ಸಿಕ್ಕಂತಾಗಿದೆ.

ಸುಪ್ರೀಂಕೋರ್ಟ್‌ನನಿರ್ದೇಶನದಂತೆ, ಅಪ್ರಾಪ್ತಮಕ್ಕಳು ಮತ್ತು ಸಂವೇದನಾಶೀಲ ಪ್ರಕರಣಗಳಿಗೆ ಸಂಬಂಧಿಸಿದ ಆದೇಶದ ಪ್ರತಿಗಳನ್ನು ಸಾರ್ವಜನಿಕವಾಗಿ ಆನ್‌ಲೈನ್‌ನಲ್ಲಿ ಲಭ್ಯವಾಗದಂತೆ ಗೌಪ್ಯವಾಗಿಡಲಾಗಿದೆ.

ತನಿಖೆಗೆ ಸಂಪೂರ್ಣ ಸಹಕಾರ ನೀಡಬೇಕು. ಸಾಕ್ಷಿಗಳಿಗೆ ಬೆದರಿಕೆ ಹಾಕಬಾರದು ಮತ್ತು ನ್ಯಾಯಾಲಯದ ಅನುಮತಿಯಿಲ್ಲದೇ ವ್ಯಾಪ್ತಿ ಬಿಟ್ಟು ಹೋಗಬಾರದು ಎಂಬಂತಹ ಷರತ್ತುಗಳನ್ನು ವಿಧಿಸಿ ಜಾಮೀನು ನೀಡಲಾಗಿದೆ ಎಂದು ತಿಳಿದುಬಂದಿದೆ.

**ಪ್ರಕರಣದ ಹಿನ್ನೆಲೆ:** ಏ.17ರಂದು ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷೆ ಮಂಜುಳ ಮಹೇಶ್ ಹಾಗೂ ತಂಡವು ಹರಿಹರ ಮಠಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿತ್ತು. ಮಠದಲ್ಲಿದ್ದ ಮಕ್ಕಳು ಸ್ವಾಮೀಜಿ ಹೊಡೆಯುತ್ತಾರೆ, ಬೈಯುತ್ತಾರೆ ಹಾಗೂಹುಷಾರಿಲ್ಲದಿದ್ದಾಗಔಷಧಕೊಡುವುದಿಲ್ಲ ಎಂಬ ಆರೋಪಗಳನ್ನು ಸಮಿತಿಯ ಮುಂದೆ ಮಾಡಿದ್ದರು.

ಈ ಸಂಬಂಧ ಮಕ್ಕಳ ವಾಸದ ಕೊಠಡಿ, ಗುರು ನಿವಾಸ ಹಾಗೂ ಭೋಜನಾಲಯಗಳನ್ನು ಸಮಿತಿಯು ಪರಿಶೀಲಿಸಿ, ಮೇಲಧಿಕಾರಿಗಳಿಗೆ ವರದಿ ಸಲ್ಲಿಸಿತ್ತು. ಈ ಬೆಳವಣಿಗೆಯ ಬೆನ್ನಲ್ಲೇ ಶ್ರೀಗಳ ಬಂಧನದ ಭೀತಿ ಎದುರಾಗಿತ್ತು.

ಸದ್ಯ ಮಠದ ಆವರಣದಲ್ಲಿ ನಿಷೇಧಾಜ್ಞೆ ಜಾರಿಯಲ್ಲಿದ್ದು, ಜಾಮೀನು ದೊರೆತಿರುವುದು ಶ್ರೀಗಳ ಬೆಂಬಲಿಗರಲ್ಲಿ ಸಮಾಧಾನ ತಂದಿದೆ. ಆದರೆ, ಲೆಕ್ಕಪತ್ರದ ವಿವಾದ ಹಾಗೂ ಮಠದ ಆಡಳಿತಾತ್ಮಕ ಸಂಘರ್ಷ ಇನ್ನೂ ಬೂದಿ ಮುಚ್ಚಿದ ಕೆಂಡದಂತೆಯೇ ಮುಂದುವರಿದಿದೆ.

# ದಕ್ಷಿಣದಲ್ಲಿ ಸೋತರೂ ಜನಮನ ಗೆದ್ದಿದ್ದೇವೆ

## ಸಿದ್ದರಾಮೋತ್ಸವವೇ ಬೇರೆ, ಬಿಎಸ್‌ವೈ ಅಭಿಮಾನೋತ್ಸವವೇ ಬೇರೆ: ರೇಣು

**ದಾವಣಗೆರೆ:** ದಾವಣಗೆರೆ ದಕ್ಷಿಣದಲ್ಲಿ ನಮ್ಮ ಅಭ್ಯರ್ಥಿ ಶ್ರೀನಿವಾಸ ದಾಸಕರಿಯಪ್ಪ ಗೆಲ್ಲಬೇಕೆಂದು ಹಗಲು-ರಾತ್ರಿ ಎನ್ನದೇ ನಾವೆಲ್ಲರೂ ಕೆಲಸ ಮಾಡಿದ್ದು, ನಾವು ಸೋಲುತ್ತೇವೆಂದು ಯಾವತ್ತೂ ಅಂದುಕೊಂಡಿರಲಿಲ್ಲ. ಆದರೆ, ಚುನಾವಣೆಯಲ್ಲಿನಾವುಸೋತರೂ, ಜನರಮನಸ್ಸಿನಲ್ಲಿಗೆದ್ದಿದ್ದೇವೆಎಂದು ಮಾಜಿ ಸಚಿವ ಎಂ.ಪಿ.ರೇಣುಕಾಚಾರ್ಯ ಹೇಳಿದ್ದಾರೆ.

ನಗರದಲ್ಲಿ ಬಿಜೆಪಿ ಅಭ್ಯರ್ಥಿ ಶ್ರೀನಿವಾಸ ದಾಸಕರಿಯಪ್ಪ ನಿವಾಸದಲ್ಲಿಮಂಗಳವಾರಸುದ್ದಿಗೋಷ್ಠಿಯಲ್ಲಿಮಾತನಾಡಿದ ಅವರು, ಮುಸ್ಲಿಂ ಅಭ್ಯರ್ಥಿಗಳು ಹೆಚ್ಚು ಮತ ಪಡೆಯುತ್ತಾರೆಂದು ಕೊಂಡಿದ್ದೆವು. ಆದರೆ, ಮುಸ್ಲಿಂ ಅಭ್ಯರ್ಥಿಗಳು ಅಷ್ಟೊಂದು ಮತಗಳನ್ನು ಪಡೆಯಲಿಲ್ಲ ಎಂದರು.

ಮುಂಬರುವ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಕಾಂಗ್ರೆಸ್ಸಿಗೆ ಸೋಲುವ ಭೀತಿ ಶುರುವಾಗಿದೆ. ಹಾಗಾಗಿಯೇ, ಸ್ಥಳೀಯ ಸಂಸ್ಥೆಗಳ ಚುನಾವಣೆಯನ್ನು ನಡೆಸದೇ, ನಿರಂತರವಾಗಿಮುಂದೂಡುತ್ತಿದ್ದಾರೆ. ದಾವಣಗೆರೆದಕ್ಷಿಣದಲ್ಲಿ ನಾವು ಗೆಲ್ಲಬೇಕಿತ್ತು ಎಂಬುದಾಗಿ ಈಗ ಜನರೆ ಮಾತನಾಡುತ್ತಿದ್ದಾರೆ ಎಂದು ಅವರು ತಿಳಿಸಿದರು.

ಮಾಜಿ ಸಿಎಂ ಬಿ.ಎಸ್. ಯಡಿಯೂರಪ್ಪನವರು ರಾಜಕೀಯಕ್ಕೆ ಜೀವನಕ್ಕೆ 50 ವರ್ಷವಾಗುತ್ತಿದೆ. ಈ ಹಿನ್ನೆಲೆಯಲ್ಲಿ ಯಡಿಯೂರಪ್ಪನವರ ಜೀವನಕ್ಕೆ ಗೌರವ ಸಲ್ಲಿಸುವ ಕೆಲಸವೇ ಚಿತ್ರದುರ್ಗದಲ್ಲಿ ಮೇ 9ರಂದು ನಡೆಯುವ ಬಿಎಸ್‌ವೈ ಅಭಿಮಾನೋತ್ಸವವಾಗಿದೆ. ಇದು ಯಡಿಯೂರಪ್ಪನವರ ಕುಟುಂಬದ ಕಾರ್ಯಕ್ರಮವಲ್ಲ. ಇಡೀ ರಾಜ್ಯದ ಯಡಿಯೂರಪ್ಪನವರ ಅಭಿಮಾನಿಗಳ ಕಾರ್ಯಕ್ರಮ ಎಂದು ಅವರು ಹೇಳಿದರು.



ಶ್ರೀನಿವಾಸ ನಿವಾಸಕ್ಕೆ ಭೇಟಿ ನೀಡಿದ್ದ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ಇತರರು ಬೆಣ್ಣೆ ದೋಸೆ ಸವಿದರು.

ಚಿತ್ರದುರ್ಗದಬಿಎಸ್‌ವೈ ಅಭಿಮಾನೋತ್ಸವಕ್ಕೆಕೇಂದ್ರ ಗೃಹ ಸಚಿವ ಅಮಿತ್ ಶಾ ಸೇರಿದಂತೆ ಹಲವಾರು ನಾಯಕರು ಆಗಮಿಸಲಿದ್ದಾರೆ. ವಿವಿಧ ಮಠಾಧೀಶರು ಕಾರ್ಯಕ್ರಮದ ಸಾನಿಧ್ಯ ವಹಿಸುತವು. ದಾವಣಗೆರೆಯಲ್ಲಿ ನಡೆದ ಸಿದ್ದರಾಮೋತ್ಸವವೇ ಬೇರೆ, ಚಿತ್ರದುರ್ಗದಲ್ಲಿ ನಡೆಯುವ ಬಿಎಸ್‌ವೈ ಅಭಿಮಾನೋತ್ಸವವೇ ಬೇರೆ ಎಂದು ರೇಣುಕಾಚಾರ್ಯ ಸ್ಪಷ್ಟಪಡಿಸಿದರು.

# ಸಮರ್ಪಕ ಬೀಜ, ರಸಗೊಬ್ಬರ ಪೂರೈಸಿ

## ರೈತರ ಮೇಲೆ ಲಾಠಿ ಬೀಸುವ ದುಸ್ಸಾಹಸ ಬೇಡ: ವಾಸುದೇವ ಮೇಟಿ ಎಚ್ಚರಿಕೆ

• **ಕನ್ನಡಪ್ರಭ ವಾರ್ತೆ** ದಾವಣಗೆರೆ

ರೈತರಿಗೆ ಸಮರ್ಪಕವಾಗಿ ರಸಗೊಬ್ಬರ ನೀಡಲು ವಿಧಿಸಿರುವ ಎಫ್‌ಐಡಿ ತರುವ ಆದೇಶವನ್ನು ಕೈಬಿಡುವ ಜೊತೆಗೆ ಸಬ್ಸಿಡಿ ರೂಪದಲ್ಲಿ ಗುಣಮಟ್ಟದ ಬೀಜ, ರಸಗೊಬ್ಬರವನ್ನು ಸಕಾಲಕ್ಕೆ ರೈತರಿಗೆ ಪೂರೈಸುವಂತೆ ಕರ್ನಾಟಕ ರಾಜ್ಯ ರೈತ ಸಂಘ ಮತ್ತು ಹಸಿರು ಸೇನೆ ರಾಜ್ಯಾಧ್ಯಕ್ಷ ವಾಸುದೇವ ಮೇಟಿ ರಾಜ್ಯ ಸರ್ಕಾರಕ್ಕೆ ಒತ್ತಾಯಿಸಿದ್ದಾರೆ.

ನಗರದಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದಅವರು, ರಾಜ್ಯ ಸರ್ಕಾರರೈತರಿಗೆರಸಗೊಬ್ಬರಎಫ್‌ಐಡಿ ತರುವಂತೆಆದೇಶಿಸಿದೆ. ಈಕೂಡಲೇಎಫ್‌ಐಡಿರದ್ದುಪಡಿಸುವ ಜೊತೆಗೆ ಸಬ್ಸಿಡಿ ರೂಪದಲ್ಲಿ ಗುಣಮಟ್ಟದ ಬೀಜ ಮತ್ತು ರಸಗೊಬ್ಬರವನ್ನು ಸಕಾಲದಲ್ಲಿ ಪೂರೈಸಲಿ ಎಂದರು.

1 ಎಕರೆಗೆ1 ಕ್ವಿಂಟಲ್ ರಸಗೊಬ್ಬರನೀಡುವುದಾಗಿಹೇಳಿರುವುದು ಖಂಡನೀಯ. ದಾವಣಗೆರೆ ಜಿಲ್ಲೆಯಲ್ಲಿ 3.29 ಲಕ್ಷ ಹೆಕ್ಟೇರ್‌ಪ್ರದೇಶಕ್ಕೆ1,59,520 ಮೆಟ್ರಿಕ್ ಟನ್ ರಸಗೊಬ್ಬರದ ಅಗತ್ಯವಿದೆ. 1 ಎಕರೆಗೆ1 ಕ್ವಿಂಟಲ್ ಗೊಬ್ಬರ ನೀಡಿದರೆ ಎಲ್ಲಿಗೆ ಹಾಕಬೇಕು? ಇಷ್ಟು ಕಡಿಮೆ ಪ್ರಮಾಣದ ರಸಗೊಬ್ಬರ ಯಾವುದಕ್ಕೂ ಸಾಲದು. ಹಾಗಾಗಿ, ಸರ್ಕಾರ ಕೂಡಲೇ ಎಫ್‌ಐಡಿ ಆದೇಶ ಕೈ ಬಿಡಬೇಕು ಎಂದು ಹೇಳಿದರು.

ಹಾವೇರಿಯಲ್ಲಿ ರಸಗೊಬ್ಬರಕ್ಕಾಗಿ ರೈತರು ಸರದಿಯಲ್ಲಿ ನಿಲ್ಲುತ್ತಿದ್ದಾರೆ. ರಸಗೊಬ್ಬರ ಪಡೆಯಲು ಬಂದ ರೈತರ ಮೇಲೆ ಲಾಠಿ ಬೀಸಲಾಗಿದೆ. ಎಲ್ಲಿಯಾದರೂ ರೈತರ ಮೇಲೆ ಲಾಠಿ ಬೀಸಿದರೆ ಮುಖ್ಯಮಂತ್ರಿ, ಸಚಿವರ ವಿರುದ್ಧ ಕಪ್ಪುಬಟ್ಟೆ ಪ್ರದರ್ಶನ, ಘೇರಾವ್, ವಿವಿಧ ರೀತಿಯ ಹೋರಾಟ ನಡೆಸಬೇಕಾದೀತು ಎಂದು ಅವರು ಎಚ್ಚರಿಸಿದರು.

ಸರ್ಕಾರ ರಸಗೊಬ್ಬರ ಪೂರೈಕೆ ಬದಲಿಗೆ ಕಳೆದ ವರ್ಷ ನ್ಯಾನೊ ಬಳಸುವಂತೆ ಹೇಳಿತ್ತು. ಆದರಿಂದ ರೈತರಿಗೆ ನಷ್ಟವಾಯಿತೇ ಹೊರತು, ಯಾವುದೇ ಅನುಕೂಲ ಆಗಲಿಲ್ಲ.




ಈಬಾರಿಅತಿಹೆಚ್ಚಿನಪ್ರಮಾಣದಲ್ಲಿಮೆಕ್ಕೆಜೋಳಬೆಳೆದಿದ್ದರೂ ಕ್ವಿಂಟಲ್‌ಗೆ ₹1700ರಿಂದ ₹1800 ದರ ಇದೆ. ರೈತರಿಗೆ ಇದರಿಂದಘೋರಅನ್ಯಾಯವಾಗುತ್ತಿದೆ. ಕಾಂಗ್ರೆಸ್‌ಸರ್ಕಾರ ರೈತರ ಪಾಲಿಗೆ ಅತ್ಯಂತ ಕಳಪೆ, ಅಯೋಗ್ಯ ಸರ್ಕಾರವಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಕಾಂಗ್ರೆಸ್ ತಾನು ಅಧಿಕಾರಕ್ಕೆ ಬಂದ ತಕ್ಷಣ ರೈತರಿಗೆ ಮಾರಕವಾದ ಮೂರೂ ಕೃಷಿ ತಿದ್ದುಪಡಿ ಕಾಯ್ದೆ ರದ್ದುಪಡಿಸುವುದಾಗಿ ಹೇಳಿತ್ತು. ಈವರೆಗೂ ರದ್ದುಪಡಿಸಿಲ್ಲ. ನೀರಾವರಿ ಯೋಜನೆ ಬಗ್ಗೆ ಗಮನಹರಿಸುತ್ತಿಲ್ಲ. ಗ್ರಾಮೀಣ ಭಾಗದ ಶಾಲೆಗಳಿಗೆ ಶಿಕ್ಷಕರನ್ನು ನೇಮಿಸುವ ಬಗ್ಗೆ ಚಿಂತನೆ ಮಾಡುತ್ತಿಲ್ಲ. ಕೃಷಿ ಪಂಪ್‌ಸೆಟ್‌ಗೆ ಡಿಜಿಟಲ್ ಮೀಟರ್ ಅಳವಡಿಕೆ, ಮೊಬೈಲ್ ಮಾದರಿಯಲ್ಲಿ ವಿದ್ಯುತ್ ರಿಚಾರ್ಜ್ ವ್ಯವಸ್ಥೆಗೆ ಮುಂದಾಗಿದೆ. ಒಟ್ಟಾರೆಯಾಗಿ ರೈತರಿಗೆ ಸರ್ಕಾರ ಮೋಸ ಮಾಡುತ್ತಿದೆ ಎಂದು ಆರೋಪಿಸಿದರು.

ಭರಮಸಮುದ್ರ ಕುಮಾರ ಮಾತನಾಡಿ, ದಾವಣಗೆರೆ ಜಿಲ್ಲಾಡಳಿತ ಕೂಡಲೇ ಬತ್ತ ಖರೀದಿ ಕೇಂದ್ರಗಳನ್ನು ಪ್ರಾರಂಭ ಮಾಡಬೇಕು. ಇಲ್ಲವಾದಲ್ಲಿ ಜಿಲ್ಲಾಧಿಕಾರಿ ಕಚೇರಿಗೆ ಬೀಗ ಹಾಕುವ ಮೂಲಕ ರೈತರು ಹಳೆಯ ಹೋರಾಟಕ್ಕೆ ಮರಳಬೇಕಾಗುತ್ತದೆ ಎಂದು ಎಚ್ಚರಿಸಿದರು.

ಸಂಘದ ಜಿಲ್ಲಾಧ್ಯಕ್ಷ ಗುಮ್ಮನೂರು ಬಸವರಾಜ, ಕೆಂಚಮ್ಮನಹಳ್ಳಿ ಹನುಮಂತಪ್ಪ, ಕಿತ್ತೂರು ಹನುಮಂತಪ್ಪ, ಸುನಿಲ್, ಕೋಲ್ಕುಂಟೆ ಉಚ್ಚಂಗೆಪ್ಪ, ಗುಂಡಪ್ಪ, ಭರತ್, ಏಕಾಂತಪ್ಪ, ಪಾಲಣ್ಣ, ಜಗದೀಶ, ಮಂಜುನಾಥ, ಮಲ್ಲಿಕಾರ್ಜುನ, ಮಧು ಇತರರು ಇದ್ದರು.